ಸಂಪುಟ 01 | ಸಂಚಿಕೆ 28 | ಮಂಗಳವಾರ 09 ಡಿಸೆಂಬರ್ 2025 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಅಂತಾರಾಷ್ಟ್ರೀಯ ಭ್ರಷ್ಟಾಚಾರ ವಿರೋಧ ದಿನ (International Anti-Corruption Day UN) 2003ರಲ್ಲಿ ಅಂಗೀಕರಿಸಿದ UN Convention Against Corruption (UNCAC) ಅನ್ನು ಸ್ಮರಿಸಲು ಆಚರಿಸಲಾಗುತ್ತದೆ.ಆಡಳಿತ, ವ್ಯವಹಾರ, ಶಿಕ್ಷಣ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಪಾರದರ್ಶಕತೆ, ಸತ್ಯನಿಷ್ಠೆ, ಮತ್ತು ನಷ್ಟರಹಿತ ವ್ಯವಸ್ಥೆ ನಿರ್ಮಿಸಲು ಜಾಗೃತಿ.ಹಲವೆಡೆ ರ್ಯಾಲಿಗಳು, ಕಾರ್ಯಾಗಾರಗಳು, ಜಾಗೃತಿ ಅಭಿಯಾನಗಳು ನಡೆಯುತ್ತವೆ.

2) ವಂಶಹತ್ಯೆ ಅಪರಾಧದ ಬಲಿಗಳ ಸ್ಮರಣಾ ದಿನ & ತಡೆ ದಿನ (International Day of Commemoration and Dignity of the Victims of the Crime of Genocide and of the Prevention of this Crime UN) ಇತಿಹಾಸದಲ್ಲಿ ನಡೆದ ವಂಶಹತ್ಯೆಗಳ ಬಲಿಗಳನ್ನು ಸ್ಮರಿಸುವ ದಿನ.ಭವಿಷ್ಯದಲ್ಲಿ ಇಂತಹ ಘಟನೆಗಳನ್ನು ತಡೆಯುವ ವಿಶ್ವದ ಸಮರ್ಪಣೆಯನ್ನು ಪ್ರತಿಬಿಂಬಿಸುತ್ತದೆ.ಮಾನವ ಹಕ್ಕುಗಳು, ಶಾಂತಿ ಮತ್ತು ಜಾಗತಿಕ ನ್ಯಾಯತತ್ತ್ವಗಳ ಕುರಿತು ಜಾಗೃತಿ ಮೂಡಿಸಲಾಗುತ್ತದೆ.

## ಸುಭಾಷಿತ

ಯಶಸ್ಸು ಕಂಡು ಸಂಭ್ರಮಿಸುವುದು ಒಳ್ಳೆಯದು. ಆದರೆ ಸೋಲಿನಿಂದ ಪಾಠ ಕಲಿಯುವುದು ಅದಕ್ಕಿಂತ ಒಳ್ಳೆಯದು.

–ಬಿಲ್ ಗೇಟ್ಸ್

# ಇಂಡಿಗೋ ವಿಚಾರದಲ್ಲಿ ಮೂಗು ತೂರಿಸಲ್ಲ ಸುಪ್ರೀಂ ಕೋರ್ಟ್

ನವದೆಹಲಿ: ಇಂಡಿಗೋ ವಿಮಾನಗಳ ರದ್ದತಿ ಮತ್ತು ವಿಳಂಬದ ಕುರಿತು ತುರ್ತು ವಿಚಾರಣೆ ನಡೆಸುವಂತೆ ಕೋರಿ ಸಲ್ಲಿಸಲಾದ ಅರ್ಜಿಯನ್ನು ಆಲಿಸಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಗಮನಾರ್ಹವಾಗಿ, ಕಳೆದ ಮಂಗಳವಾರದಿಂದ 4,500 ಕ್ಕೂ ಹೆಚ್ಚು ವಿಮಾನಗಳು ರದ್ದಾಗಿವೆ. ಲಕ್ಷಾಂತರ ಜನರು ಸಿಲುಕಿಕೊಂಡಿದ್ದಾರೆ ಎಂದು ನಮಗೆ ಅರ್ಥವಾಗಿದೆ.

ಬಹುಶಃ ಕೆಲವು ಜನರಿಗೆ ತುರ್ತು ಕೆಲಸವಿರಬಹುದು, ಮತ್ತು ಅವರಿಗೆ ಅದು ಸಾಧ್ಯವಾಗುತ್ತಿಲ್ಲ. ಆದರೆ ಭಾರತ ಸರ್ಕಾರವು ಈ ಸಮಸ್ಯೆಯನ್ನು ಅರಿತುಕೊಂಡಿದೆ. ಸಕಾಲಿಕ ಕ್ರಮಗಳನ್ನು ತೆಗೆದುಕೊಂಡಿರುವಂತೆ ತೋರುತ್ತಿದೆ. ಈಗ ನಮಗೆ ಯಾವುದೇ ತುರ್ತು ಕಾಣುತ್ತಿಲ್ಲ ಎಂದು ಸಿಜೆಐ ಸೂರ್ಯ ಕಾಂತ್ ತಿಳಿಸಿದ್ದಾರೆ. ದೇಶಾದ್ಯಂತ ಇಂಡಿಗೋ ಕಾರ್ಯಾಚರಣೆಗಳು ಪರಿಣಾಮ ಬೀರುತ್ತಿವೆ. ಇಂದು 400 ಕ್ಕೂ ಹೆಚ್ಚು ವಿಮಾನಗಳು ರದ್ದಾಗಿವೆ, ದೆಹಲಿ,



ಮುಂಬೈ, ಬೆಂಗಳೂರು, ಹೈದರಾಬಾದ್ ಮತ್ತು ಚೆನ್ನೈ ವಲಯಗಳು ಹೆಚ್ಚು ಹಾನಿಗೊಳಗಾಗಿವೆ.ಡಿಸೆಂಬರ್ 10 ರ ವೇಳೆಗೆ ಕಾರ್ಯಾಚರಣೆಗಳು ಸ್ಥಿರಗೊಳ್ಳಲಿವೆ ಎಂದು ವಿಮಾನಯಾನ ಸಂಸ್ಥೆ ಹೇಳಿಕೆ ನೀಡಿದೆ.

ಇಂಡಿಗೋದ ರಾಷ್ಟ್ರವ್ಯಾಪಿ ವಿಮಾನಗಳ ಅಡಚಣೆಯಿಂದಾಗಿ ಗುವಾಹಟಿ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರು ಇಂದು ರದ್ದತಿ ಮತ್ತು ಉತ್ತರಿಸಲಾಗದ ಪ್ರಶ್ನೆಗಳನ್ನು ಎದುರಿಸುತ್ತಿದ್ದಾರೆ.ಸ್ಪಷ್ಟ ಮಾಹಿತಿ ಅಥವಾ ಬೆಂಬಲವಿಲ್ಲದೆ ಹಲವಾರು ದಿನಗಳವರೆಗೆ ಸಿಲುಕಿಕೊಂಡ ನಂತರ ಒಬ್ಬ ದುಃಖಿತ ಪ್ರಯಾಣಿಕರು ತಮ್ಮ ಅನುಭವದ ಬಗ್ಗೆ ಮಾತನಾಡಿ, ಜೈಪುರದಿಂದ ಗುವಾಹಟಿಗೆ ಪ್ರಯಾಣ ಬೆಳೆಸಿದ್ದೆ, ಆದರೆ, ಡಿ.5 ರಂದು ಸಂಜೆ 5.55 ಕ್ಕೆ ಹಿಂದಿರುಗುವ ವಿಮಾನವನ್ನು ಇದ್ದಕ್ಕಿದ್ದಂತೆ ರದ್ದುಗೊಳಿಸಲಾಯಿತು, ಇದು ವಿಮಾನ ನಿಲ್ದಾಣದಲ್ಲಿ ಗೊಂದಲಕ್ಕೆ ಕಾರಣವಾಯಿತು ಎಂದು ಹೇಳಿದರು.

ಹೀಗಾಗಿ ವಿಮಾನ ನಿಲ್ದಾಣದಲ್ಲಿ ಸಾಕಷ್ಟು ಅವ್ಯವಸ್ಥೆ ಉಂಟಾಯಿತು, ಇದರಿಂದಾಗಿ ಸಿಬ್ಬಂದಿ ಕಿಟಕಿ ಮುಚ್ಚಿದರು, ಮತ್ತು ನಾವು ಹಿಂತಿರುಗಿದೆವು ಎಂದು ಅವರು ಹೇಳಿದರು. ಮುಂದಿನ ಮೂರು ದಿನಗಳಲ್ಲಿ ಅವರ ಟಿಕೆಟ್ ಅನ್ನು ಮರುನಿಗದಿಪಡಿಸಲು ಅಥವಾ ಇಂಡಿಗೋದ ದೂರು ತಂಡವನ್ನು ಸಂಪರ್ಕಿಸಲು ಪದೇ ಪದೇ ಪ್ರಯತ್ನಿಸಿದೆ ಎಂದು ಅವರು ಹೇಳಿದರು, ಆದರೆ ಗ್ರಾಹಕ ಬೆಂಬಲವು ಪ್ರತಿಕ್ರಿಯಿಸಲಿಲ್ಲ ಎಂದು ಅವರು ಮಾಹಿತಿ ನೀಡಿದ್ದಾರೆ.

## ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಅವರಿಗೆ "ಕರುನಾಡ ಅನಾಥ ರಕ್ಷಕ" ಪ್ರಶಸ್ತಿ ಪ್ರದಾನ

❑ ನೈಜ್ಯ ದೇಸೆ ನ್ಯೂಸ್

**ಬೆಂಗಳೂರು: ಬೆಟ್ಟ ಹಲಸೂರಿನಲ್ಲಿರುವ ಹಸಿರೇ ಉಸಿರು ಟ್ರಸ್ಟ್ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾನವೀಯ ಸೇವೆಯನ್ನು ಪ್ರತಿಬಿಂಬಿಸುವ ವಿಶೇಷ ಗೌರವ ವಿತರಣೆ ಕಾರ್ಯಕ್ರಮ ಜರುಗಿತು.**

ರಾಯಚೂರು ಜಿಲ್ಲೆಯ ಸಿಂಧನೂರಿನ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಅವರಿಗೆ "ಕರುನಾಡ ಅನಾಥ ರಕ್ಷಕ" ಎಂಬ ಶ್ರೇಷ್ಠ ಪ್ರಶಸ್ತಿ ಪ್ರದಾನ ಮಾಡಿ ವಿಶೇಷವಾಗಿ ಗೌರವಿಸಲಾಯಿತು. ಅಶಕ್ತರು, ಅನಾಥರು, ವಯಸ್ಕರು ಮತ್ತು



ಬುದ್ಧಿಮಾಂದ್ಯರಿಗೆ ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಡಾ. ಹಿರೇಮಠ ಅವರ ಸಂಘಟನೆಯ ಸಾಮಾಜಿಕ ಬದ್ಧತೆ ಹಾಗೂ ಮಾನವೀಯ ಸೇವೆಗೆ ಈ ಗೌರವ ಲಭಿಸಿದೆ. ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಪದಾಧಿಕಾರಿಗಳು, ಗಣ್ಯರು ಹಾಗೂ ಸಾಂಸ್ಕೃತಿಕ ಕ್ಷೇತ್ರದ ಪ್ರತಿಷ್ಠಿತರು ಪಾಲ್ಗೊಂಡು ಅಭಿನಂದಿಸಿದರು.

## ಕಾನೂನು ಪದವೀಧರರಿಂದ ಆಡಳಿತ ನ್ಯಾಯಧೀಕರಣ ತರಬೇತಿಗೆ ಅರ್ಜಿ ಆಹ್ವಾನ

❑ ನೈಜ್ಯ ದೇಸೆ ನ್ಯೂಸ್

ರಾಯಚೂರು ಡಿಸೆಂಬರ್ 08 (ಕರ್ನಾಟಕ ವಾರ್ತೆ): ಇಲ್ಲಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ 2025–26ನೇ ಸಾಲಿನಲ್ಲಿ ಪರಿಶಿಷ್ಟ ವರ್ಗದ ಕಾನೂನು ಪದವೀಧರರನ್ನು ಆಡಳಿತ ನ್ಯಾಯಧೀಕರಣ ತರಬೇತಿಗೆ ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು, ಇಲಾಖೆಯ ವೆಬ್‌ಸೈಟ್ ವಿಳಾಸ: www.twd. karnataka. gov.in ರಡಿಯ ಸ್ಟಿಪೆಚೆಡ್ ಟು ಲಾ ಗ್ರಾಯಜ್ಯುಯೇಟ್ಸ್ (Stipend to LAW Graduates) ಲಿಂಕ್‌ನಲ್ಲಿ ಡಿಸೆಂಬರ್ 19ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯನ್ನು ಎಲ್ಲಾ ದಾಖಲಾತಿಗಳೊಂದಿಗೆ ಜಿಲ್ಲಾ ಅಥವಾ ತಾಲೂಕಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯಕ್ಕೆ ಕಚೇರಿ ವೇಳೆಯಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ರಾಯಚೂರು ಇವರನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ಶಿವಮಾನಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊನ್ನೂರು ಗ್ರಾಮಸ್ಥರಿಂದ ಅಂಬೇಡ್ಕರ್ ಸ್ಮರಣೆ

❑ ನೈಜ್ಯ ದೇಸೆ ನ್ಯೂಸ್

**ಯಳಂದೂರು: ತಾಲ್ಲೂಕಿನ ಹೊನ್ನೂರು ಗ್ರಾಮದಲ್ಲಿ ಡಾ. ಬಿ ಆರ್ ಅಂಬೇಡ್ಕರ್ ಅವರ 69ನೇ ಪರಿ ನಿರ್ವಾಣ ದಿನಾಚರಣೆ ಅಂಗವಾಗಿ ಗ್ರಾಮದ ಯಜಮಾನರು ಮುಖಂಡರು ಯುವಕರು ಸೇರಿ ಮೊಂಬತ್ತಿ ಮೆರವಣಿಗೆ ನಡೆಸಲಾಯಿತು.**

ಗ್ರಾಮದ ಪ್ರಮುಖ ರಸ್ತೆಗಳ ಮೂಲಕ ಮೆರವಣಿಗೆ ನಡೆಸಿ ಗ್ರಾಮದಲ್ಲಿರುವ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪುತ್ತಳಿ ಮುಂದೆ ಪೂಜೆ ಸಲ್ಲಿಸಿ ಮೇಣದಬತ್ತಿ ಹಚ್ಚಿ ಗೌರವ ಸಲ್ಲಿಸಿದರು. ಈ ವೇಳೆ ಗ್ರಾಮಸ್ಥರು ಮಾತನಾಡಿ ಅಂಬೇಡ್ಕರ



ರ ಸಮಾನತೆಯ ಮಂತ್ರ ಇಡೀ ವಿಶ್ವವೇ ಮೆಚ್ಚುವಂತದ್ದಾಗಿದೆ, ಇಂತಹ ಮಹಾನ್ ಸಾಧಕ ನಮ್ಮ ದೇಶದಲ್ಲಿ ಹುಟ್ಟಿದ್ದು ನಮ್ಮೆಲ್ಲರ ಹೆಮ್ಮೆಯಾಗಿದೆ.


ಅಂಬೇಡ್ಕರ್ ರವರು ಇಡೀ ಜಗತ್ತು ಮೆಚ್ಚುವ ಸಂವಿಧಾನವನ್ನು ರಚಿಸಿದ್ದಾರೆ ಈ ಮೂಲಕ ಭಾರತ ದೇಶದ ಆಡಳಿತ ವ್ಯವಸ್ಥೆಗೆ ಹೊಸ ಆಯಾಮ ತಂದುಕೊಟ್ಟಿದ್ದಾರೆ ಎಂದು ಸ್ಮರಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಯಜಮಾನರು ಜನಪ್ರತಿನಿಧಿಗಳು ಯುವಕರು ಹಾಗೂ ವಿದ್ಯಾರ್ಥಿಗಳು ಹಾರಿದ್ದರು.

## ಹವಾಮಾನದಲ್ಲಿ ಏರುಪೇರು: ಇಲಾಖೆಯಿಂದ ಎಚ್ಚರಿಕೆ

❑ ನೈಜ್ಯ ದೇಸೆ ನ್ಯೂಸ್

**ರಾಜ್ಯದ ಹೆಚ್ಚಿನ ಭಾಗಗಳಲ್ಲಿ ಕಳೆದ ಕೆಲ ದಿನಗಳಿಂದ ಮುಂದುವರಿದಿರುವ ಒಣ ಹವೆಯ ಪ್ರಭಾವ ಇಂದು ಕೂಡ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ವಿಶೇಷವಾಗಿ ಉತ್ತರ ಒಳನಾಡು, ಕರಾವಳಿ ಮತ್ತು ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಮಳೆ ಸಾಧ್ಯತೆ ಇಲ್ಲದ ಒಣ ವಾತಾವರಣ ಮುಂದುವರಿಯಲಿದೆ.**

ಬೆಂಗಳೂರು ನಗರದಲ್ಲಿ ಹಲವು ದಿನಗಳಿಂದ ಮಂಜು ಮುಸುಕಿದ ಬೆಳಗ್ಗಿನ ವಾತಾವರಣ ಕಂಡುಬರುತ್ತಿದ್ದು, ಇಂದು ಕೂಡ ಅದೇ ಪರಿಸ್ಥಿತಿ ಮುಂದುವರಿಯಲಿದೆ. ತಾಪಮಾನದಲ್ಲಿ ಗಣನೀಯ ಇಳಿಕೆಯ ಹಿನ್ನಲೆಯಲ್ಲಿ ಚಳಿಯ ಉಗ್ರತೆ ಹೆಚ್ಚುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ಬೆಂಗಳೂರಿನಲ್ಲಿ



ಗಾಳಿಯ ವೇಗ ಪ್ರತಿ ಗಂಟೆಗೆ ಸುಮಾರು 8 ಕಿ.ಮೀ. ಇರಲಿದ್ದು, ಗರಿಷ್ಠ ತಾಪಮಾನ 27ಲಿಅ ಮತ್ತು ಕನಿಷ್ಠ ತಾಪಮಾನ 16.4ಲಿಅ ದಾಖಲಾಗುವ ನಿರೀಕ್ಷೆಯಿದೆ. ದಕ್ಷಿಣ ಒಳನಾಡಿನ ಬಳ್ಳಾರಿ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ರಾಮನಗರ, ಚಿಕ್ಕಮಗಳೂರು, ಶಿವಮೊಗ್ಗ, ಹಾಸನ, ಕೊಡಗು, ಚಾಮರಾಜನಗರ, ಮೈಸೂರು, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಒಣ ಹವೆಯ ವಾತಾವರಣ ಮುಂದುವರಿಯಲಿದೆ. ಕರಾವಳಿಯ ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿಯೂ ಮಳೆರಹಿತ ವಾತಾವರಣವಿರಲಿದೆ.

ಉತ್ತರ ಒಳನಾಡಿನ ಬೆಳಗಾವಿ, ಬೀದರ್, ವಿಜಯಪುರ, ಬಾಗಲಕೋಟೆ, ಹಾವೇರಿ, ಗದಗ, ಧಾರವಾಡ, ಕಲಬುರಗಿ, ಕೊಪ್ಪಳ, ರಾಯಚೂರು, ಯಾದಗಿರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿಯೂ ಕಳೆದ ಕೆಲವು ದಿನಗಳಿಂದ ಒಣ ಹವೆಯ ವಾತಾವರಣವಿದ್ದು, ಇಂದು ಕೂಡ ಅದೇ ಹವಾಮಾನ ಕಾಣಿಸಿಕೊಳ್ಳಲಿದೆ. ಒಟ್ಟಾರೆ, ರಾಜ್ಯದ ಎಲ್ಲಾ ಭಾಗಗಳಲ್ಲೂ ಒಣಗಾಳಿ ಹಾಗೂ ಚಳಿ ಮಿಶ್ರಿತ ವಾತಾವರಣ ಮುಂದುವರಿಯಲಿದ್ದು, ವಿಶೇಷವಾಗಿ ಬೆಂಗಳೂರು ಸೇರಿದಂತೆ ಒಳನಾಡು ಭಾಗಗಳಲ್ಲಿ ಮಂಜು ಮುಸುಕಿದ ಬೆಳಗಿನ ವಾತಾವರಣ ಮುಂದುವರಿಯಲಿದ್ದು, ತಾಪಮಾನದಲ್ಲಿ ಸ್ವಲ್ಪ ಇಳಿಕೆ ಕಂಡುಬರುವ ಸಾಧ್ಯತೆ ಇದೆ.

## ಉತ್ತಮ ಬೆಳೆಗೆ ಮಣ್ಣಿನ ಫಲವತ್ತತೆ ಕಾಯ್ದುಕೊಳ್ಳಿ: ಎ.ಆರ್ ಕುರುಬರ

❑ ನೈಜ್ಯ ದೇಸೆ ನ್ಯೂಸ್

ರಾಯಚೂರು: 'ಉತ್ತಮ ಬೆಳೆಗೆ ಮಣ್ಣಿನ ಫಲವತ್ತತೆ ಕಾಯ್ದುಕೊಳ್ಳಬೇಕಿರುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ' ಎಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಎ.ಆರ್ ಕುರುಬರ ಮನವಿ ಮಾಡಿದರು. ಇಲ್ಲಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಕೃಷಿ ಮಹಾವಿದ್ಯಾಲಯದ ಮಣ್ಣು ವಿಜ್ಞಾನ ವಿಭಾಗ, ಕೃಷಿ ಇಲಾಖೆ, ಇಫ್ಕೋ ಸಂಸ್ಥೆ, ಆರ್.ಸಿ.ಎಫ್ ಹಾಗೂ ಕೋರಮಂಡಲ ಇಂಟರ್ ನ್ಯಾಷನಲ್ ಲಿಮಿಟೆಡ್ ಆಶ್ರಯದಲ್ಲಿ ಈಚೆಗೆ ಏರ್ಪಡಿಸಿದ್ದ ವಿಶ್ವ ಮಣ್ಣು ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

'ಮಣ್ಣು ಸಸ್ಯಗಳಿಗೆ ಬೇಕಾದ ಪೋಷಕಾಂಶಗಳನ್ನು ಒದಗಿಸುವ ಜೀವ



ಸತ್ವಗಾಗಿದೆ. ಸಕಲ ಜೀವಿಗಳಿಗೆ ಆಧಾರವಾಗಿದೆ. ಆದ್ದರಿಂದ ಪ್ರತಿಯೊಬ್ಬರು ಮಣ್ಣಿನ ಸಂರಕ್ಷಣೆಯ ಹೊಣೆ ವಹಿಸಿಕೊಳ್ಳಬೇಕು' ಎಂದರು. 'ಮಣ್ಣಿನಲ್ಲಿ ಸಾವಯವ ಇಂಗಾಲದ ಪ್ರಮಾಣ ಹೆಚ್ಚಿಸಲು ರೈತರು ವಿವಿಧ ಕ್ರಮಗಳನ್ನು ಅನುಸರಿಸಬೇಕು, ಪ್ರತಿ ಮೂರು ವರ್ಷಕ್ಕೊಮ್ಮೆ ಮಣ್ಣಿನ ಪರೀಕ್ಷೆ ಮಾಡಿಸಿ ಅದಕ್ಕನುಗುಣವಾಗಿ ರಸಗೊಬ್ಬರಗಳನ್ನು ಒದಗಿಸಬೇಕು.ಹಿರಿಯರಿಂದ ಪಡೆದ ಫಲವತ್ತಾದ ಭೂಮಿಯನ್ನು ಮುಂದಿನ ಪೀಳಿಗೆಗೆ ಆರೋಗ್ಯಯುತ ಬಳುವಳಿಯಾಗಿ ನೀಡಬೇಕು' ಎಂದು ಸಲಹೆ ನೀಡಿದರು. 'ರೈತರಿಗೆ ವಿವಿಧ ಸಾವಯವ ಗೊಬ್ಬರಗಳು, ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುವ ತಂತ್ರಜ್ಞಾನಗಳ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ತಿಳಿಸುತ್ತಿರುವ ಕೃಷಿ ವಿಜ್ಞಾನ ಕೇಂದ್ರದ ಕಾರ್ಯ ಮಹತ್ವದ್ದಾಗಿದೆ' ಎಂದು ಹೇಳಿದರು.

ವಿಸ್ತರಣಾ ನಿರ್ದೇಶಕರು ಮಣ್ಣಿನ ಸಂರಕ್ಷಣೆಯ ಬಗ್ಗೆ ರೈತರಿಗೆ, ವಿಜ್ಞಾನಿಗಳಿಗೆ, ವಿದ್ಯಾರ್ಥಿಗಳಿಗೆ ಹಾಗೂ ಸಿಬ್ಬಂದಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ಕೋರಮಂಡಲ್ ಲಿಮಿಟೆಡ್‌ನ ವಲಯ ಅಧಿಕಾರಿ ಅಮರನಾಥ ರೆಡ್ಡಿ, ಆರ್.ಸಿ.ಎಫ್‌ನ ವಲಯ ಅಧಿಕಾರಿ ಪ್ರವೀಣ.ಜಿ.ಡಿ, ಇಫ್ಕೋ ಸಂಸ್ಥೆಯ ಸಚಿನ್ ಎಸ್.ಎಚ್. ಮಾತನಾಡಿದರು. ಕೃಷಿ ಮಹಾವಿದ್ಯಾಲಯದ ಡೀನ್ ಕೆ. ನಾರಾಯಣರಾವ್ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಜ್ಞಾನಿ ಶ್ರೀವಾಣಿ ಜಿ.ಎನ್ ಸ್ವಾಗತಿಸಿದರು. ಮಲ್ಲರೆಡ್ಡಿ ನಿರೂಪಿಸಿದರು ಹಾಗೂ ಇಂ.ವೀಣಾ ವಂದಿಸಿದರು. ಕೃಷಿ ವಿಜ್ಞಾನ ಕೇಂದ್ರದ ಸಿಬ್ಬಂದಿ ಹಾಗೂ ಮಣ್ಣು ವಿಜ್ಞಾನ ವಿಭಾಗದ ಸ್ನಾತಕೋತ್ತರ ವಿದ್ಯಾರ್ಥಿಗಳು, 150 ರೈತರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ನೂಪುರನಾದ

ಬಾನು,ಪರ್ವತಗಳ ಬಣ್ಣದಲ್ಲಿ ನಿನ್ನ ಕಂಡೆ
ಕೋಗಿಲೆಯ ಇಂಪಾದ ಗಾನದಲ್ಲಿ ನಿನ್ನ ಕಂಡೆ
ನವಿಲಿನ ನರ್ತನದಲ್ಲಿ ನಿನ್ನ ನಾಟ್ಯ ಕಂಡೆ
ನಿನ್ನ ನೂಪುರನಾದ ಕೇಳಿಸಿದ ಕನಸ ಕಂಡೆ!!

ನಿನ್ನ ನಾಮ ಮನದಲಿ ಸದಾ ಗುನುಗುತ್ತಿರುವೆ
ದುರ್ವಿಯಲ್ಲಿ ಪಡಬಾರದ ಕಷ್ಟ ಪಡುತ್ತಿರುವೆ
ಪಾಪ, ಕೂಪದಿಂದ ಮುಕ್ತಿಯ ಬಯಸಿರುವೆ
ನಿನ್ನ ಆಂತರ್ಯದಿಂದ ಏನ್ನ ಎಂದು ನೋಡುವೆ?!!

ಕಾಲಿಗೆ ಗೆಜ್ಜೆ ಕಟ್ಟಿ ಬಿಟ್ಟನು ನರ್ತಿಸಲು
ತನ್ನ ತಾಳಕ್ಕೆ ತಕ್ಕಂತೆ ನನ್ನ ಕುಣಿಸಲು
ಹರಿಯೇ ಚಿತ್ತಗೊಟ್ಟು ಒಮ್ಮೆ ಕೇಳಯ್ಯ
ಬಾಳಲಿ ಬಳಲಿ ಬೆಂದು ಸೋತಿರುವೆನಯ್ಯ!!

ಭವಬಂಧನಗಳಿಂದ ಬಿಡಿಸಿ ಪೊರೆ ತಂದೆ
ಇಂದ್ರಿಯಗಳ ನಿಗ್ರಹಿಸುವ ಮತಿನೀಡೆಂದೆ
ಹಗಲಿರುಳು ನಿನ್ನ ನಾಮ ಮನದಲಿ ಜಪಿಸಿದೆ
ಪಾಪ ಕರ್ಮಗಳ ಕ್ಷಮಿಸಿ ಮುಕ್ತಿ ದಯಪಾಲಿಸು
ತಂದೆ!!

ಹರಿಯೇ ನೀನಲ್ಲದೆ ಎನಗೆ ಬಂಧುವಾರು
ನನ್ನ ಮನದ ನೋವ ಅರಿತವರಾರು
ನೀ ಎನಗೆ ಸ್ನೇಹಿತನಯ್ಯ
ನೀ ಎನಗೆ ಇಹ ಪರ ಲೋಕದ ಆತ್ಮಬಂಧುವಯ್ಯ!!

ಶ್ರೀಮತಿ ಕವಿತಾ ಹಿರೇಮಠ ಕವಿತಾಳ

## ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣ ಸಿಂಧನೂರು ಅಧ್ಯಕ್ಷ ಮಂಜುನಾಥ್ ಗಾಣಿಗೇರ ಅವರಿಂದ ನಾಗಲಕ್ಷ್ಮಿ ಚೌಧರಿ ಅವರಿಗೆ ಮನವಿ

ನೈಜ್ಯ ದೆಸೆ ನ್ಯೂಸ್

**ಬಾಣಂತಿಯರ ಸರಣಿ ಸಾವು ಪ್ರಕರಣ, ಸಂತ್ರಸ್ತ ಕುಟುಂಬಗಳಿಗೆ 25 ಲಕ್ಷ ರೂ. ಪರಿಹಾರಕ್ಕೆ ಆಗ್ರಹಿಸಿ ಮಹಿಳಾ ಆಯೋಗಕ್ಕೆ ಮಂಜುನಾಥ ಗಾಣಗೇರ ಮನವಿ ಸಿಂಧನೂರು, ಡಿಸೆಂಬರ್ 8 ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಹೆರಿಗೆಯಾದ ನಂತರ 2024ರ ಅಕ್ಟೋಬರ್ ತಿಂಗಳಿನಲ್ಲಿ ರಿಮ್ಸ್ಗೆ ಚಿಕಿತ್ಸೆಗೆ ದಾಖಲಾದ ನಾಲ್ವರು ಬಾಣಂತಿಯರ ಸರಣಿ ಸಾವಾಗಿದ್ದು, ಮೃತ ಮಹಿಳೆಯರ ಸಂತ್ರಸ್ತ ಕುಟುಂಬಗಳಿಗೆ ಇದುವರೆಗೂ ಸರ್ಕಾರದಿಂದ ಪರಿಹಾರ ದೊರಕಿರುವುದಿಲ್ಲ.**

ಈ ಕೂಡಲೇ ಆ ಕುಟುಂಬಗಳಿಗೆ ರೂ.25 ಲಕ್ಷ ಪರಿಹಾರ ಒದಗಿಸಬೇಕು ಹಾಗೂ ಅನಾಥರಾದ ನಾಲ್ಕು ಮಕ್ಕಳ ಪೋಷಣೆಯ ಜವಾಬ್ದಾರಿಯನ್ನು ಸರ್ಕಾರವೇ ಹೊತ್ತುಕೊಳ್ಳುವಂತೆ ಆಗ್ರಹಿಸಿ, ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ತಾಲೂಕು ಅಧ್ಯಕ್ಷ ಮಂಜುನಾಥ ಗಾಣಗೇರ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌದರಿ ಅವರಿಗೆ ಸೋಮವಾರ ಬೆಂಗಳೂರಿನಲ್ಲಿ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ. ಸಿಂಧನೂರು ತಾಲೂಕು ಸಾರ್ವಜನಿಕ ಆಸ್ಪತ್ರೆಗೆ




ಹೆರಿಗಾಗಿ ದಾಖಲಾಗಿದ್ದ ತಾಲೂಕಿನ ಆರ್.ಎಚ್.ಕ್ಯಾಂಪ್-3ರ ಮಹಿಳೆ ಮೌಸಂಬಿ ಮಂಡಲ್ ಗಂಡ ಮಹೇಶ್ವರ ಮಂಡಲ್ ಹೆರಿಗೆ ನಂತರ ದಿನಾಂಕ: 21-10-2024ರಂದು ಮೃತಪಟ್ಟಿರುತ್ತಾರೆ. 21-10-2024ರಂದು ಆಸ್ಪತ್ರೆಗೆ ದಾಖಲಾಗಿದ್ದ ರಾಗಲಪರ್ವಿ ಗ್ರಾಮದ ಚನ್ನಮ್ಮ ಗಂಡ ಬಸವರಾಜ ನಾಯಕ ಅವರೂ 8 ದಿನಗಳ ನಂತರ ರಿಮ್ಸ್ನಲ್ಲಿ ನವೆಂಬರ್ 2ರಂದು ಸಾವಿಗೀಡಾಗಿದ್ದಾರೆ.

ದಿನಾಂಕ: 28-10-2024ರಂದು ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದ, ಉದ್ಬಾಳ.ಜೆ ಗ್ರಾಮದ ಗರ್ಭಿಣಿ ಮಹಿಳೆ ಚಂದ್ರಕಲಾ ಹೆರಿಗೆ ನಂತರ ಅಸ್ವಸ್ಥಗೊಂಡು ರಾಯಚೂರಿನ ರಿಮ್ಸ್ನಲ್ಲಿ ಮೃತಪಟ್ಟಿದ್ದಾರೆ ಹಾಗೂ ದಿನಾಂಕ: 30-10-2024ರಂದು ನಗರದ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಹೆರಿಗೆಗಾಗಿ ದಾಖಲಾಗಿದ್ದ ಮಸ್ಕಿ ತಾಲೂಕಿನ ಅಂಕುಶದೊಡ್ಡಿ ಗ್ರಾಮದ ರೇಣುಕಮ್ಮ ಗಂಡ ಬಸವರಾಜ ಹೆರಿಗೆ ನಂತರ ಅಸ್ವಸ್ಥಗೊಂಡು ರಾಯಚೂರಿನ ಜಿಲ್ಲಾಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ. ಈ ನಾಲ್ಕು ಪ್ರಕರಣಗಳು ಸರಣಿಯಾಗಿ ಘಟಿಸಿವೆ. ನಾಲ್ವರು ಬಾಣಂತಿಯರು ಮೃತಪಟ್ಟು, ನವಜಾತ ಶಿಶುಗಳು ತಾಯಿಯನ್ನು ಕಳೆದುಕೊಂಡ ಅನಾಥವಾಗಿವೆ. ಇದರಿಂದ ಈ ಮಹಿಳೆಯರ ಕುಟುಂಬಗಳು ಕಣ್ಣೀರಿನಲ್ಲಿ ಕೈತೊಳೆಯುತ್ತಿವೆ.

ಸಿಎಂ, ಆರೋಗ್ಯ ಇಲಾಖೆ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಸಂಬಂಧಿಸಿದ ಇಲಾಖೆಯ ಪ್ರಮುಖ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ವರ್ಷ ಗತಿಸಿದರೂ ಇಲ್ಲಿಯವರೆಗೂ ಈ ಕುಟುಂಬಗಳಿಗೆ ಪರಿಹಾರ ನೀಡಿರುವುದಿಲ್ಲ." ಎಂದು ಮನವಿಯಲ್ಲಿ ಪ್ರಸ್ತಾಪಿಸಿ ಗಮನ ಸೆಳೆದಿದ್ದಾರೆ.

'25 ಲಕ್ಷ ಪರಿಹಾರ ಕೊಡಿ' "ಸಿಂಧನೂರು ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಹೆರಿಗೆಯಾದ ನಂತರ ಅಸ್ವಸ್ಥಗೊಂಡು ಆರ್.ಎಚ್.ಕ್ಯಾಂಪ್ 3ರ ಮೌಸಂಬಿ ಮಂಡಲ್, ರಾಗಲಪರ್ವಿಯ ಚನ್ನಮ್ಮ, ಉದ್ಬಾಳ.ಜೆ ಗ್ರಾಮದ ಚಂದ್ರಕಲಾ ಹಾಗೂ ಅಂಕುಶದೊಡ್ಡಿಯ ರೇಣುಕಮ್ಮ ನಾಲ್ವರು ಬಾಣಂತಿಯರು ಮೃತಪಟ್ಟಿದ್ದು ಈ ನಾಲ್ವರು ಮಹಿಳೆಯರ ಕುಟುಂಬಗಳಿಗೆ 25 ಲಕ್ಷ ಪರಿಹಾರ ಒದಗಿಸಬೇಕು., ಮಹಿಳೆಯರು ಮೃತರಾಗಿದ್ದರಿಂದ ಅನಾಥವಾಗಿರುವ ನಾಲ್ಕು ಮಕ್ಕಳ ಪೋಷಣೆಯ ಜವಾಬ್ದಾರಿಯನ್ನು ಸರ್ಕಾರವೇ ಹೊತ್ತುಕೊಳ್ಳಬೇಕು.

ಹೆರಿಗೆಯಾದ ನಂತರ ಬಾಣಂತಿಯರ ಸಾವಿನ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು, ಸಿಂಧನೂರು ನಗರದ ಪಿಡಬ್ಲು ?ಯಡಿ ಕ್ಯಾಂಪಿನಲ್ಲಿ ಇತ್ತೀಚೆಗೆ ಆರಂಭವಾಗಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಅಗತ್ಯ ವೈದ್ಯರು, ಸಿಬ್ಬಂದಿ ಕೊರತೆ ಇದ್ದು, ಕೂಡಲೇ ನೇಮಕ ಮಾಡಬೇಕು, ಕೆಲಸದ ಅವಧಿಯಲ್ಲಿ ಬೇರೆ ಕಡೆ ಖಾಸಗಿ ಕ್ಲಿನಿಕ್ ನಡೆಸುವ ವೈದ್ಯರ ಮೇಲೆ ಶಿಸ್ತುಕ್ರಮ ಜರುಗಿಸಬೇಕು" ಎಂಬ ಬೇಡಿಕೆಗಳುಳ್ಳ ಮನವಿಪತ್ರವನ್ನು ಅಧ್ಯಕ್ಷರಿಗೆ ಸಲ್ಲಿಸಿರುವುದಾಗಿ ಮಂಜುನಾಥ ಗಾಣಗೇರ ತಿಳಿಸಿದ್ದಾರೆ.

## ಡಿಸೆಂಬರ್ 10ರಂದು ಯರಗೇರಾ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 08 (ಕರ್ನಾಟಕ ವಾರ್ತೆ): ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ-ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಯರಗೇರಾ ವಿದ್ಯುತ್ ಉಪ-ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಫ್-3 ಯರಗೇರಾ ಎನ್‌ಜೆವೈ ಫೀಡರ್‌ನಲ್ಲಿ.**

ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 10ರ ಬೆಳಗ್ಗೆ 10 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಯರಗೇರಾ ಗ್ರಾಮದ ವ್ಯಾಪ್ತಿಯಲ್ಲಿ ವಿದ್ಯುತ್ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕಾರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 12ರಂದು ಮಾನವಿಯಲ್ಲಿ ಶಿಕ್ಷಣ ಮೇಳ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಡಿಸೆಂಬರ್ 08 (ಕರ್ನಾಟಕ ವಾರ್ತೆ): ಜಿಲ್ಲೆಯ ಮಾನವಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025-26ನೇ ಪಿಎಮ್‌ಎನ್‌ಎಎಮ್ ಯೋಜನೆಯಡಿಯಲ್ಲಿ ಶಿಕ್ಷಣ ಮೇಳವನ್ನು ಮಾನವಿ ಪಟ್ಟಣದ ಬಸವ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಡಿಸೆಂಬರ್ 12ರ ಬೆಳಿಗ್ಗೆ 10 ಗಂಟೆಗೆ ಆಯೋಜಿಸಲಾಗಿದೆ.**

ಈ ಶಿಕ್ಷಣ ಮೇಳದಲ್ಲಿ ವಿವಿಧ ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸುತ್ತಿದ್ದು, ಶಿಕ್ಷಣ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆಮಾಡಿಕೊಳ್ಳುತ್ತಿರುವುದರಿಂದ ಐಟಿಐ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ತರಬೇತಿದಾರರು ಮತ್ತು ಪಿಯುಸಿ ಹಾಗೂ ಪದವಿಯಲ್ಲಿ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ ಎಂದು ಮಾನವಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಮಾಜಿಕ ಪರಿಶೋಧನಾ ಶಾಲಾ ಸಭೆ



ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಜಿಲ್ಲಾ ಪಂಚಾಯತ,ವಿಜಯಪುರ ಮತ್ತು ತಾಲೂಕ ಪಂಚಾಯತ, ತಾಳಿಕೋಟಿ, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ ಬೆಂಗಳೂರು,ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಿಜಯಪುರ 2025-2026ನೇ ಸಾಲಿನ ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ ಮತ್ತು ಕ್ಷೀರ ಭಾಗ್ಯ ಯೋಜನೆಗಳ ಸಾಮಾಜಿಕ ಪರಿಶೋಧನಾ ಶಾಲಾಸಭೆ ಶ್ರೀ ಬ್ರಹ್ಮಲಿಂಗೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇತ್ತೀಚಗೆ ಜರುಗಿತು.**

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಆಡಳಿತಾಧಿಕಾರಿ ಕಿರಣ ಎಚ್.ಪಾಟೀಲ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಮೈತ್ರಾ. ರಾಠೋಡ ನಿರ್ದೇಶಕರು ಸಾಮಾಜಿಕ ಪರಿಶೋಧನಾ ಇಲಾಖೆ ನಿರ್ದೇಶಕಿ ಮೈತ್ರಾ ರಾಥೋಡ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಕ್ಕಳಿಗೆ ಪೌಷ್ಟಿಕಾಂಶ ಹಾಗೂ ಬಿಸಿ ಊಟದ ಮಹತ್ವ ವಿವರಿಸಿ, ಈ ಪ್ರಾಥಮಿಕ ಶಾಲೆಯಲ್ಲಿ ಎಲ್ಲಾ ವಿದ್ಯಾರ್ಥಿಗಳು ಬಿಸಿ ಊಟ ಸೇವಿಸುತ್ತಿದ್ದಾರೆ ಎಂದು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಜೆ.ಎಮ್.ಕೊಣ್ಣೂರ, ಹಾಗೂ ಎಸ್.ಎಸ್.ಪಾಟೀಲ ಇದ್ದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು. ಶಿಕ್ಷಕ ಬಿ.ಆಯ್.ಹಿರೇಹೊಳಿ ನಿರೂಪಿಸಿ ವಂದಿಸಿದರು.

# ಬೆಕಿನಾಳ ಗ್ರಾಮದ ಡಾ ಪ್ರವೀಣ್ ಬಿರಾದಾರ್ ಗೆ "ಶಿಕ್ಷಣ ಸಿರಿ "ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಜ್ಞಾನ ಶಾರದೆ ಅಕಾಡೆಮಿಯ ಅಧ್ಯಕ್ಷರು ಮತ್ತು" ಭಾರತೀಯ ಶಿಕ್ಷಣ ರತ್ನ ರಾಷ್ಟ್ರ ಪ್ರಶಸ್ತಿ " ವಿಜೇತರಾದ ಡಾ ಪ್ರವೀಣ್ ಬಿರಾದಾರ ಅವರಿಗೆ ಬೆಂಗಳೂರಿನ ಅನ್ವೇಷಣೆ ಸಾಂಸ್ಕೃತಿಕ ಪ್ರತಿಷ್ಠಾನದ" ಶಿಕ್ಷಣ ಸಿರಿ ರಾಜ್ಯೋತ್ಸವ " ಪ್ರಶಸ್ತಿಗೆ ಭಾಜನರಾಗಿದ್ದಾರೆ.**

ಮೂಲತ: ತಾಳಿಕೋಟಿ ತಾಲೂಕಿನ ಬೆಕಿನಾಳ ಗ್ರಾಮದ ದಿ. ಬಸನಗೌಡ ಹಾಗೂ ಶರಣಮ್ಮ ಬಿರಾದಾರ್ ದಂಪತಿಯ ಪುತ್ರರು ಮತ್ತು ದಿ ಭಾಗ್ಯಶ್ರೀ ಪ್ರವೀಣ್ ಬಿರಾದರ್




ಅವರ ತಂದೆ ಯಾದ ಇವರು, ಪ್ರಸ್ತುತ ಕಲ್ಬುರ್ಗಿ ನಿವಾಸಿಯಾಗಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ತಮ್ಮದೇ ಛಾಪು ಮೂಡಿಸಿರುವ ಇವರು, ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಕಳೆದ 20 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಇವರ ಸೇವೆ ಪರಿಗಣಿಸಿ "ಶಿಕ್ಷಣ ಸಿರಿ " ರಾಜ್ಯೋತ್ಸವ ಪ್ರಶಸ್ತಿ ನೀಡಲಾಗಿದೆ. ಇವರ ಶೈಕ್ಷಣಿಕ ಸೇವೆಗೆ ಇಂಟರ್ನಾಷ್ಯನಲ್ ಹ್ಯೂಮನ್ ಡೆವಲಪ್ಮೆಂಟ್ (USA) ವಿವಿ ಯಿಂದ ಡಾಕ್ಟರೇಟ್ ಪಡೆದಿದ್ದಾರೆ. ಇನ್ನೂ ಅನೇಕ ರಾಜ್ಯ, ರಾಷ್ಟ್ರಮತ್ತು ಅಂತರಾಷ್ಟ್ರೀಯ ಪ್ರಶಸ್ತಿಗಳು ಇವರಿಗೆ ಲಭಿಸಿರುತ್ತದೆ.

ಪ್ರಸ್ತುತ ಕಲ್ಬುರ್ಗಿಯ ಜ್ಞಾನ ಶಾರದೆ ಅಕಾಡೆಮಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇವರ ಈ ಸಾಧನೆಗೆ ಬೆಕ್ಕಿನಾಳ ಗ್ರಾಮಸ್ಥರು, ಆಕ್ಸ್ಫರ್ಡ್ ಪಾಟೀಲ್ ಇಂಗ್ಲಿಷ್ ಮೀಡಿಯಂ ಶಾಲೆ ನಾಗರಭಟ್ಟ ಅಧ್ಯಕ್ಷರು, ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಮತ್ತು ಬ್ರಿಲಿಯಂಟ್ ಇಂಗ್ಲಿಷ್ ಮೀಡಿಯಂ ಶಾಲೆ ಮೈಲೇಶ್ವರ ತಾಳಿಕೋಟಿ ಅಧ್ಯಕ್ಷರು ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

# ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್ ಅವರ ಸೇವೆ, ಸಾಧನೆ ಶ್ಲಾಘನೀಯ: ಡಾ.ರಝಾಕ್ ಉಸ್ತಾದ್

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಡಿ 08 ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ಉತ್ತಮ ವ್ಯಕ್ತಿತ್ವ ಹಾಗೂ ಭವಿಷ್ಯ ರೂಪಿಸುವಲ್ಲಿ ಪ್ರಾಧ್ಯಾಪಕರ ಜವಾಬ್ದಾರಿ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ನೂರಾರು ಯುವಕರಿಗೆ ವೃತ್ತಿ ಬದುಕು ಕಟ್ಟಿಕೊಟ್ಟ ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್ ಅವರ ಸೇವೆ, ಸಾಧನೆ ಶ್ಲಾಘನೀಯ' ಎಂದು ಕೆಪಿಸಿಸಿ ಮಾಧ್ಯಮ ವಕ್ತಾರ ರಝಾಕ್ ಉಸ್ತಾದ್ ಹೇಳಿದರು.**

ಭಾನುವಾರ ಸಂಜೆ ಪಟ್ಟಣದ ಗ್ಯಾಲಕ್ಸಿ ಫಂಕ್ಷನ್ ಹಾಲ್ ನಲ್ಲಿ ಭಾರತೀಯ ಐಟಿ ಉದ್ಯಮಗಳಲ್ಲಿ ಸೈಬರ್ ಅಪರಾಧಗಳ ನಿಯಂತ್ರಣಕ್ಕಾಗಿ ಕೃತಕ ಬುದ್ಧಿಮತ್ತೆಯ ಬಳಕೆ ಕುರಿತು ಸಂಶೋಧನಾ ಪ್ರಬಂಧ ಮಂಡಿಸಿ, ಅಲಿಗಡ್ ನ ಮಂಗಲಯಾತನ ವಿಶ್ವವಿದ್ಯಾಲಯದ ಕಂಪ್ಯೂಟರ್ ವಿಜ್ಞಾನ ವಿಭಾಗದ ವತಿಯಿಂದ ಪಿಎಚ್.ಡಿ (ಡಾಕ್ಟರೇಟ್) ಪದವಿಗೆ ಭಾಜನರಾದ ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್ ಅವರಿಗೆ ಗೆಳೆಯರು ಹಾಗೂ ವಿದ್ಯಾರ್ಥಿಗಳ ಬಳಗ ಹಮ್ಮಿಕೊಂಡಿದ್ದ ಅಭಿನಂದನಾ



ಸಮಾರಂಭದಲ್ಲಿ ಅವರು ಮಾತನಾಡಿದರು. ಪ್ರಾಧ್ಯಾಪಕ ಡಾ.ರವಿ ಮಸ್ಕಿ ಅವರು ಸೈಬರ್ ಅಪರಾಧಗಳ ನಿಯಂತ್ರಣ ಕುರಿತು ಡಾ.ಮಿನಾಜುಲ್ ಹಸನ್ ಅವರು ಕೈಗೊಂಡಿರುವ ಸಂಶೋಧನೆ ಕುರಿತು ವಿವರಿಸಿದರು.

ಮುಖಂಡರಾದ ಹ್ಯಾರಿಸ್ ಸಿದ್ದಿಕಿ, ಸಾಜಿದ್ ಖಾದ್ರಿ, ಖಾಲೀದ್ ಖಾದ್ರಿ, ಸುರೇಶ ಕುರ್ಡಿ, ಆರಿಫ್ ಮಿಯಾ ಚಾಗಬಾವಿ, ತಾಯಪ್ಪ ಬಿ.ಹೊಸೂರು, ಮೊಹಮ್ಮದ್ ಸಾಜಿದ್ ರಾಯಚೂರು, ಮಹಾಂತೇಶ ಓಲೇಕಾರ, ನಿವೃತ್ತ ಶಿಕ್ಷಕರಾದ ಹುಸೇನಪ್ಪ ಕುರ್ಡಿ, ಮಧುಕುಮಾರಿ ಪಾಂಡೆ, ಮಹಿಮೂದಾ ಬೇಗಂ ಮತ್ತಿತರರು ಮಾತನಾಡಿ, ಸೈಯದ್ ಮಿನಾಜುಲ್ ಹಸನ್ ಅವರ ಶೈಕ್ಷಣಿಕ ಸಾಧನೆ ಮತ್ತು ಸೇವೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಗೌರವ ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್, ನನ್ನ ಶೈಕ್ಷಣಿಕ ಹಾಗೂ ವೃತ್ತಿ ಜೀವನದ ಯಶಸ್ಸಿಗೆ ತಂದೆ-ತಾಯಿಯ ಆಶೀರ್ವಾದ, ವಿದ್ಯೆ ಕಲಿಸಿದ ಗುರುಗಳ ಮಾರ್ಗದರ್ಶನ, ಕುಟುಂಬ ಸದಸ್ಯರ ಪ್ರೋತ್ಸಾಹ, ಸ್ನೇಹಿತರು ಹಾಗೂ ಸಹೋದ್ಯೋಗಿಗಳ ಸಹಕಾರ ಮುಖ್ಯ ಕಾರಣ.

ವಿದ್ಯಾರ್ಥಿಗಳಿಗೆ ಅತ್ಯುತ್ತಮ ಶಿಕ್ಷಣ ಹಾಗೂ ಉದ್ಯೋಗ ಕಲ್ಪಿಸುವುದು ಮತ್ತು ಶಾಂತಿ, ಸೌಹಾರ್ದ, ಸಹೋದರತ್ವದ ಸಮಾಜ ನಿರ್ಮಾಣಕ್ಕೆ ಶ್ರಮಿಸುವುದು ನನ್ನ ಸಂಕಲ್ಪ' ಎಂದು ತಿಳಿಸಿದರು. ಪಟ್ಟಣದ ಹಲವಾರು ಗಣ್ಯರು, ಸಂಘ ಸಂಸ್ಥೆಗಳ ಮುಖಂಡರು, ಸರ್ಕಾರಿ ನೌಕರರ ಸಂಘ ಹಾಗೂ ಮುಸ್ಲಿಂ ನೌಕರರ ಸಂಘದ ಪದಾಧಿಕಾರಿಗಳು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಸೈಯದ್ ಮಿನಾಜುಲ್ ಹಸನ್ ಅವರನ್ನು ಸನ್ಮಾನಿಸಿ ಅಭಿನಂದಿಸಿದರು. ಕಾರ್ಯಕ್ರಮದಲ್ಲಿ ಸೈಯದ್ ಮಿನಾಜುಲ್ ಹಸನ್ ಅವರ ಶಿಕ್ಷಣ ಮತ್ತು ವೃತ್ತಿ ಬದುಕಿನ ಮಹತ್ವದ ಸಾಧನೆಗಳ ಕಿರುಚಿತ್ರ ಪ್ರದರ್ಶಿಸಲಾಯಿತು. ಶಿಕ್ಷಕ ಅಬ್ದುಲ್ ಯೂನುಸ್ ಅಭಿನಂದನಾ ಭಾಷಣ ಮಾಡಿದರು.

ಹಿರಿಯ ವಕೀಲ ಸೈಯದ್ ತನ್ವೀರುಲ್ ಹಸನ್ ಕಾರ್ಯಕ್ರಮ ಉದ್ಘಾಟಿಸಿದರು. ಯುವ ಮುಖಂಡ ಮಹಮ್ಮದ್ ಬೇಗ್ ಸಂವಿಧಾನ ಪೀಠಿಕೆ ಬೋಧಿಸಿದರು.ಹಸನ್ ಕುಟುಂಬದ ಸದಸ್ಯರಾದ ಸೈಯದ್ ಶಮಶೀರುಲ್ ಹಸನ್, ಸೈಯದ್ ಸರ್ಫರಾಜುಲ್ ಹಸನ್, ಶೇಖ್ ಅಲಿ ಮತ್ತಿತರರು ಉಪಸ್ಥಿತರಿದ್ದರು. ಎಂ.ಎ.ಎಚ್. ಮುಖೀಮ್ ಪ್ರಾಸ್ತಾವಿಕ ಭಾಷಣ ಮಾಡಿದರು. ಶಿಕ್ಷಕ ಅಜಗರ್ ಅಲಿ ನಿರೂಪಿಸಿದರು. ಉಪನ್ಯಾಸಕ ಮಹಿಬೂಬ್ ಮದ್ಲಾಪುರ ಸ್ವಾಗತಿಸಿದರು ಪ್ರಾಧ್ಯಾಪಕ ಸೈಯದ್ ಮುಜೀಬ್ ಅಹ್ಮದ್ ವಂದಿಸಿದರು.

## ನೇಮಕಾತಿ ಪ್ರಕಟಣೆ

KVS ನೇಮಕಾತಿ 2025 14967 ಬೋಧಕ ಮತ್ತು ಬೋಧಕೇತರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಏಗಿಖ ನೇಮಕಾತಿ 2025: 14967 ಬೋಧಕ ಮತ್ತು ಬೋಧಕೇತರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕೇಂದ್ರೀಯ ವಿದ್ಯಾಲಯ ಸಂಘಟನೆಯು ನವೆಂಬರ್ 2025 ರ ಏಗಿಖ ಅಧಿಕೃತ ಅಧಿಸೂಚನೆಯ ಮೂಲಕ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಅಖಿಲ ಭಾರತ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 04–ಡಿಸೆಂಬರ್–2025 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು (ಕೊನೆಯ ದಿನಾಂಕ 11–ಡಿಸೆಂಬರ್–2025 ರವರೆಗೆ ವಿಸ್ತರಿಸಲಾಗಿದೆ)

https://examinationservices.nic.in/recsys2025/root/Home.aspx?enc=Ei-4cajBkK1gZSfgr53ImFbEsl0hvvhEEw-gxfU0IzC28jtU4yhpqb3pomlo4g+VC8

Official Website: kvsangathan.nic.in

ಕೊನೆಯ ದಿನಾಂಕ 11–ಡಿಸೆಂಬರ್–2025

## (ಡಿ.9) ಸಹಪಠ್ಯ ಚಟುವಟಿಕೆಗಳ ಸ್ಪರ್ಧಾ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ 2025–26 ನೇ ಸಾಲಿನ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರಿಗೆ ಪ್ರತ್ಯೇಕವಾಗಿ ನಡೆಸಲಾಗುವ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಗಳು ಇಂದು ನಡೆಯಲಿವೆ.**

ತಾಳಿಕೋಟಿ ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಬೆಳಿಗ್ಗೆ 10–30 ಘಂಟೆಗೆ ನಡೆಯಲಿರುವ ಈ ಸ್ಪರ್ಧೆಗಳಲ್ಲಿ ಸರ್ಕಾರದಿಂದ ಮಾನ್ಯತೆ ಹೊಂದಿರುವ ಎಲ್ಲಾ ಶಿಕ್ಷಣ ಸಂಸ್ಥೆಗಳ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರು ಭಾಗವಹಿಸಲು ಅರ್ಹರಾಗಿರುತ್ತಾರೆ. ಸದರಿ ಕಾರ್ಯಕ್ರಮದಲ್ಲಿ ಭಕ್ತಿಗೀತೆ, ಆಶುಭಾಷಣ (ಕನ್ನಡ ಮಾಧ್ಯಮದಲ್ಲಿ ಮಾತ್ರ), ಪ್ರಬಂಧ ಸ್ಪರ್ಧೆ (ಕನ್ನಡ ಮಾಧ್ಯಮದಲ್ಲಿ ಮಾತ್ರ), ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆ, ರಸಪ್ರಶ್ನೆ (ಸಾಮಾನ್ಯ ಜ್ಞಾನ), ರಸಪ್ರಶ್ನೆ (ವಿಜ್ಞಾನ) ಈ ಎಲ್ಲ ವಿಷಯಗಳಿಗೆ ಸಂಬಂಧಿಸಿದ ಸ್ಪರ್ಧೆಗಳು ಇರುತ್ತವೆ. ಸ್ಪರ್ಧೆಗಳಲ್ಲಿ ಭಾಗವಹಿಸುವ ಎಲ್ಲ ಶಿಕ್ಷಕರು ನಿಗಧಿತ ಸಮಯಕ್ಕೆ ಕಾರ್ಯಕ್ರಮ ಸ್ಥಳದಲ್ಲಿ ಹಾಜರಿದ್ದು ಯಶಸ್ವಿಗೊಳಿಸಲು ಸಹಕರಿಸಬೇಕು ಎಂದು ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ ಹಾಗೂ ಶಿಕ್ಷಣ ಸಂಯೋಜಕ, ನೋಡಲ್ ಅಧಿಕಾರಿ ಎಂ.ಕೆ.ಬಾಗಬಾನ ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 10ರಂದು ಕೈಗಾರಿಕೋದ್ಯಮಿಗಳಿಗೆ ಅರಿವು ಕಾರ್ಯಗಾರ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಡಿಸೆಂಬರ್ 08 (ಕರ್ನಾಟಕ ವಾರ್ತೆ): ಇಲ್ಲಿನ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ 2025–26ನೇ ಸಾಲಿನ ರಾಂಪ್ ಯೋಜನೆಯಡಿಯಲ್ಲಿ ಬೆಂಗಳೂರಿನ ಭಾರತೀಯ ರಫ್ತು ಸಂಸ್ಥೆಯ ರಫ್ತು ಉತ್ತೇಜನ ಮತ್ತು ಸೌಲಭ್ಯ ಒಕ್ಕೂಟ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಅರಿವು ಮೂಡಿಸುವ ಕಾರ್ಯಗಾರವನ್ನು ನಗರದ ಹೈದ್ರಾಬಾದ್ ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಡಿಸೆಂಬರ್ 10ರ ಸಂಜೆ 4 ಗಂಟೆಗೆ ಹಮ್ಮಿಕೊಳ್ಳಲಾಗಿದ್ದು,**

ಜಿಲ್ಲೆಯಲ್ಲಿರುವ ಎಲ್ಲಾ ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕಾ ಘಟಕಗಳ ಮುಖ್ಯಸ್ಥರು, ಉದ್ದಿಮೆದಾರರು ಕಾರ್ಯಾಗಾರದಲ್ಲಿ ಭಾಗವಹಿಸಿ ಸದುಪಯೋಗಪಡಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಸಹಾಯಕ ನಿರ್ದೇಶಕರಾದ ಲಕ್ಷ್ಮೀಕಾಂತ ಕುಲಕರ್ಣಿ ಅವರ ಮೊಬೈಲ್ ಸಂಖ್ಯೆ 8861241093ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಮಕ್ಕಳ ಪ್ರತಿಭೆಯನ್ನು ಅನಾವರಣ ಮಾಡುವ ವೇದಿಕೆ ಪ್ರತಿಭಾ ಕಾರಂಜಿ :ಶಿವರಾಜ ಪೂಜಾರಿ

ನೈಜ್ಯ ದೆಸೆ ನ್ಯೂಸ್

**ಅರಕೇರಾ: ಡಿ 09–ಮಕ್ಕಳಲ್ಲಿ ಪ್ರತಿಭೆಯೆನ್ನುವುದು ಪಠ್ಯವಿಷಯವನ್ನು ಹೊರತು ಪಡಿಸಿಯು ಸೂಕ್ತವಾಗಿ ಅಡಗಿರಬಹುದು. ಅದು ಸಂಗೀತ, ಚಿತ್ರಕಲೆ, ನೃತ್ಯ, ಮಿಮಿಕ್ರಿ, ಭಾಷಣ, ಹೀಗೆ ಯಾವುದೇ ರೂಪದಲ್ಲಿಯೂ ಮಕ್ಕಳ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸುವುದೇ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ದೇಶ ಮತ್ತು ಸರ್ಕಾರದ ಘನ ಉದ್ದೇಶವಾಗಿದೆ ಎಂದು ಕ್ಷೇತ್ರ ಸಮನ್ವಯಾಧಿಕಾರಿ ಶಿವರಾಜ ಪೂಜಾರಿ ಹೇಳಿದ್ದರು.**



ಸಮುದ್ರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ನಡೆದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಬಿ.ಗಣೇಕಲ್ ವಲಯದಲ್ಲಿ ಒಂದು ಪ್ರೌಢ ಶಾಲೆ, ನಾಲ್ಕು ಹಿರಿಯ ಪ್ರಾಥಮಿಕ, ಹತ್ತು ಕಿರಿಯ ಪ್ರಾಥಮಿಕ ಶಾಲೆ ಒಟ್ಟು 15 ಶಾಲೆಯ ವಿದ್ಯಾರ್ಥಿಗಳು ಪ್ರತಿಭಾ ಕಾರಂಜಿಯಲ್ಲಿ ಭಾಗವಹಿಸಿದ್ದರು. ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ಮಕ್ಕಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಸಮಾರಂಭ ಅಧ್ಯಕ್ಷತೆಯನ್ನು ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷರಾದ ಅಂಬಣ್ಣ ಗೌಡ ಅವರು ವಹಿಸಿದ್ದರು, ವೆಂಕೋಬ ನಾಯಕ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಶಿವಕುಮಾರ್ ಕರಿಗುಡ್ಡ, ಬಸವರಾಜ ಹುಲಿಗುಡ್ಡ ಎಸ್.ಡಿ.ಎಮ್.ಸಿ. ಸದಸ್ಯರು, ಮನೋಹರ್ ಶಾಸ್ತ್ರೀ ತಾಲೂಕು ಸಂಪನ್ಮೂಲ ವ್ಯಕ್ತಿಗಳು, ಬಸಯ್ಯ ಸಾತಲ್ ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳು, ಹನುಮಂತ ದೊಡ್ಡಮನಿ ಗ್ರಾಮ ಪಂಚಾಯಿತಿ ಸದಸ್ಯರು, ಅಕ್ಕನಾಗಮ್ಮ ನಿವೃತ್ತಿ ಶಿಕ್ಷಕಿ, ಸಿದ್ದಮ್ಮ ಮುಖ್ಯಗುರು, ಬಸವರಾಜ ಸ್ವಾಮಿ, ನಾಗರೆಡ್ಡಿ, ರಾಮನಗೌಡ, ವೇದಿಕೆಯಲ್ಲಿ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯರಾದ ಶಿವಪ್ಪ, ಸವಿತಾ, ಹನುಮಂತ ಪೂಜಾರಿ, ವೆಂಕಟೇಶ ಯಾದವ್, ಮಹೇಶ್, ಪ್ರಿಯಾಂಕ, ವೆಂಕಟೇಶ, ಸದ್ದಾಂ ಹುಸೇನ್, ಮಣಿಕಂಠ, ಮಾಳಪ್ಪ, ದೇವರಾಜ್, ಸೇರಿದಂತೆ ಮುಂತಾದವರು ಇದ್ದರು.

# ಅಂತರ್ ವಿಶ್ವವಿದ್ಯಾಲಯ ಪುರುಷರ ವಾಲಿಬಾಲ್ ಕ್ರೀಡಾಕೂಟಕ್ಕೆ ಡಿಗ್ರಿ ಕಾಲೇಜಿನ ವಿದ್ಯಾರ್ಥಿಗಳು ಆಯ್ಕೆ



ಕುಮಾರ್ ತಿಮ್ಮಣ್ಣ ತಂದೆ ಪರಮಣ್ಣ



ಕುಮಾರ್ ಅಮೀನ್ ಸಾಬ್ ತಂದೆ ಖದರ್ ಸಾಬ್

ನೈಜ್ಯ ದೆಸೆ ನ್ಯೂಸ್

ಡಿಸೆಂಬರ್ 10 ರಿಂದ 14 ರವರೆಗೆ ಜೆ–ಎನ್ ಟಿಯು ವಿಶ್ವವಿದ್ಯಾಲಯ, ಕಾಕಿನಾಡ **ಆಂಧ್ರಪ್ರದೇಶದಲ್ಲಿ ನಡೆಯುವ ದಕ್ಷಿಣ ಭಾರತ ಅಂತರ್ ವಿಶ್ವವಿದ್ಯಾಲಯ ಪುರುಷರ ವಾಲಿಬಾಲ್ ಕ್ರೀಡಾಕೂಟಕ್ಕೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ತಂಡಕ್ಕೆ ನಗರದ ಸರ್ಕಾರಿ ಡಿಗ್ರಿ ಕಾಲೇಜಿನ ಬಿಎ 5 ನೇ ಸೆಮಿಸ್ಟರ್ ವಿದ್ಯಾರ್ಥಿ ಕುಮಾರ್ ಅಮೀನ್ ಸಾಬ್ ತಂ. ಖಾದರ್ ಸಾಬ್, ಬಿಎ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿ ಕುಮಾರ್ ತಿಮ್ಮಣ್ಣ ತಂ.ಪರಮಣ್ಣ ಆಯಕ್‌ಎಯಾಗಿದ್ದಾರೆಂದು ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಪಾಂಡು ಹೇಳಿದರು.**

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ತಂಡವನ್ನು ಪ್ರತಿನಿಧಿಸಿ ನಮ್ಮ ಕಾಲೇಜಿಗೂ ಹಾಗೂ ತಾಲೂಕಿಗೂ ಕೀರ್ತಿ ತಂದಿದ್ದಾರೆ. ಇವರಿಗೆ ಕಾಲೇಜಿನ ಅಭಿವೃದ್ಧಿ ಸಮಿತಿಯ ಅಧ್ಯಕ್ಷರು, ಸದಸ್ಯರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು, ಪ್ರಾಚಾರ್ಯರು, ವಿದ್ಯಾರ್ಥಿ ಬಳಗ ಇವರಿಗೆ ಹೃದಯಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ: ಕಾಲೇಜಿನ ಹಿರಿಯ ಪ್ರಾಧ್ಯಾಪಕ ಪ್ರೊ.ಜಾಜಿ ದೇವೇಂದ್ರಪ್ಪ, ಪ್ರೊ.ಪುಷ್ಪ, ಪ್ರೊ.ಹಿಷರತ ಬೇಗಂ, ಪತ್ರಾಂಕಿತ ವ್ಯವಸ್ಥಾಪಕರಾದ ಮೊಹಮ್ಮದ್ ಸಿದ್ಧಿಕಿ, ಸಹಾಯಕ ಪ್ರಾಧ್ಯಾಪಕ ಜಯಶ್ರೀ ಪಾಟೀಲ್, ಉಪನ್ಯಾಸಕರಾದ ರಾಜೇಶ ಎಂ, ದೈಹಿಕ ಶಿಕ್ಷಣ ವಿಭಾಗದ ಸಂಯೋಜಕ ಡಾ.ಲವಕುಮಾರ್ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕ ಶಿವ. ಕೆ, ಸೇರಿದಂತೆ ಸಿಬ್ಬಂದಿ ವರ್ಗದವರಿದ್ದರು.

# ಮಾದರ ಚೆನ್ನಯ್ಯ ಜಯಂತಿ ಪ್ರತಿಭಾ ಪುರಸ್ಕಾರ

ನೈಜ್ಯ ದೆಸೆ ನ್ಯೂಸ್

**ಲಿಂಗಸುಗೂರು: ಡಿ 08 ಕುಲತಿಲಕ ಶಿವಶರಣ ಮಾದರ ಚೆನ್ನಯ್ಯ ಜಯಂತಿ ಅಂಗವಾಗಿ ಡಿ.14 ರಂದು ಬೆಳಿಗ್ಗೆ 11.00 ಘಂಟೆಗೆ ಪ್ರತಿಭಾ ಪುರಸ್ಕಾರ ಹಾಗೂ ಅಭಿವಂದನಾ ಸಮಾರಂಭವನ್ನು ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ನೌಕರರ ಸಂಘದ ಅಧ್ಯಕ್ಷ ಬಸವರಾಜ ಕೆ.ಇ.ಬಿ. ತಿಳಿಸಿದರು.**




ಪಟ್ಟಣ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಸಮಾರಂಭದಲ್ಲಿ ಸಮಾಜದ ಗುರುಗಳು ಹಾಗೂ ಜನಪ್ರತಿನಿಧಿಗಳು ಅಧಿಕಾರಿಗಳು ಆಗಮಿಸಲ್ಲಿದ್ದಾರೆ. ಎಸ್.ಎಸ್.ಎಲ್.ಸಿ, ಪಿಯುಸಿ ದ್ವಿತೀಯ ವರ್ಷದಲ್ಲಿ ಶೇ.85 ಕ್ಕಿಂತ ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳು ಹಾಗೂ ಎ.ಬಿ.ಬಿ.ಎಸ್. ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು ಅರ್ಹ ವಿದ್ಯಾರ್ಥಿಗಳು ಡಿ.10ರ ಒಳಗಾಗಿ ಅಂಕಪಟ್ಟಿ ಜಾತಿ ಪ್ರಮಾಣ ಪತ್ರ ಅಗತ್ಯ ದಾಖಲೆಗಳನ್ನು ಬಸವಲಿಂಗಪ್ಪ ಉಪನ್ಯಾಸಕರು 9740338346 ಹಾಗೂ ಬಸವರಾಜ.ಕೆ 9449688895 ಇವರಲ್ಲಿ ಸಲ್ಲಿಸಿಬೇಕು. ಹೆಚ್ಚಿನ ಮಾಹಿತಿಗಾಗಿ ಸದರಿ ನಂಬರ್ ಗಳಿಗೆ ಕರೆ ಮಾಡಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರಾದ ಬಸವರಾಜ ಮ್ಯಾಗೇರಿ, ಗ್ಯಾನಪ್ಪ ಕಟ್ಟಿಮನಿ, ಕೆಂಚಪ್ಪ, ರಮೇಶ ಗೋಸ್ಲೆ, ಮೋಹನ್ ಗೋಸ್ಲೆ, ಅಮರೇಶ ಮ್ಯಾಗೇರಿ ಸೇರಿ ಇತರರು ಇದ್ದರು.

# ಮಾನ್ವಿ ಮತ್ತು ಸಿರವಾರ ತಾಲೂಕಿನ ಕಾರ್ಮಿಕರ ಮಕ್ಕಳಿಗಾಗಿ ಕಾರ್ಮಿಕ ವಸತಿಯುತ ಶಾಲೆಯನ್ನು ಮಂಜೂರು ಮಾಡಿಸಲಾಗುವುದು: ಹಂಪಯ್ಯನಾಯಕ



ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಡಿ 08 ತಾಲೂಕಿನ ಬಲ್ಲಟ್ಟಗಿ ಗ್ರಾಮದ ಶಾಸಕರ ನಿವಾಸದ ಅವರಣದಲ್ಲಿ ಶಾಸಕ ಹಂಪಯ್ಯನಾಯಕ ಕಾರ್ಮಿಕ ಇಲಾಖೆಯಿಂದ ಫಲಾನುಭವಿ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ಟೂಲ್ ಕೀಟ್ ಹಾಗೂ ಸೇಫ್ಟಿ ಕೀಟ್ ಗಳನ್ನು ವಿತರಿಸಿ ಮಾತನಾಡಿ ರಾಜ್ಯ ಸರ್ಕಾರವು ಕಾರ್ಮಿಕ ಇಲಾಖೆ ಮೂಲಕ ಅಸಂಘಟಿತ ಕಾರ್ಮಿಕರಿಗೆ ದೈನಂದಿನ ಕೇಲಸಗಳಿಗೆ ಅಗತ್ಯವಾದ ಸ್ವಯಂ ಉದ್ಯೋಗವನ್ನು ಮಾಡಿಕೊಳ್ಳುವುದಕ್ಕೆ ಬೇಕಾಗಿರುವ ಅಗತ್ಯ ಸಲಾಕರಣೆಗಳನ್ನು ಹಾಗೂ ಸುರಕ್ಷ ಪರಿಕಾರಗಳ ಕೀಟ್ ಗಳನ್ನು ವಿತರಿಸಲಾಗುತ್ತಿದೆ.**

ಕಾರ್ಮಿಕರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಂಡು ಉತ್ತಮ ಅದಾಯವನ್ನು ಹೊಂದಿ ತಮ್ಮ ಕುಟುಂಬಗಳನ್ನು ಚೆನ್ನಾಗಿ ನಿರ್ವಹಣೆ ಮಾಡಿ ಹಾಗೂ ತಮ್ಮ ಮಕ್ಕಳಿಗೆ ಉತ್ತಮ ಉನ್ನತ ಶಿಕ್ಷಣವನ್ನು ನೀಡುವ ಮೂಲಕ ಅವರ ಜೀವನವನ್ನು ರೂಪಿಸಿ ಮಾನ್ವಿ ಮತ್ತು ಸಿರವಾರ ತಾಲೂಕುಗಳ ಕಾರ್ಮಿಕ ಕುಟುಂಬಗಳ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದಕ್ಕಾಗಿ ಕಾರ್ಮಿಕ ಇಲಾಖೆ ಜಾರಿಗೆ ತಂದಿರುವ ಕಾರ್ಮಿಕ ಮಕ್ಕಳ ವಸತಿಯುತ ಶಾಲೆ ಮಂಜೂರು ಮಾಡುವಂತೆ ಕಾರ್ಮಿಕ ಸಚಿವರಾದ ಸಂತೋಷ ಲಾಡ್ ರವರಿಗೆ ಕೋರಲಾಗುವುದು ಎಂದು ತಿಳಿಸಿದರು.

ಮಾನ್ವಿ ಮತ್ತು ಸಿರವಾರ ತಾಲೂಕುಗಳ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ಮಂಜೂರಾದ ಟೂಲ್ ಕೀಟ್ ಹಾಗೂ ಸೇಫ್ಟಿ ಕೀಟ್ ಗಳನ್ನು ಶಾಸಕರು ವಿತರಿಸಿದರು. ಕಾರ್ಯಕ್ರಮದಲ್ಲಿ ತಾಲೂಕು ಕಾರ್ಮಿಕ ಇಲಾಖೆಯ ನಿರೀಕ್ಷಕರಾದ ಮಲ್ಲಪ್ಪ, ಸಿಬ್ಬಂದಿಗಳಾದ ಶರಣಬಸವ,ರುದ್ರಪ್ಪನಾಯಕ, ಕಾರ್ಮಿಕ ಸಂಘಟನೆಯ ಮುಖಂಡರಾದ ಪರಶುರಾಮ್ ಬಾಗಲವಾಡ,ಪಂಪ್ಪಣ್ಣ ಚಾಗಿ, ಸದಾನಂದ,ರಮೇಶ,ಜಫಾರ್, ಅಬ್ರಹಾಂ,ಮಾರೇಶ,ಉಮೇಶ್,ಮೌನೇಶ, ಸೇರಿದಂತೆ ಮಾನ್ವಿ ಮತ್ತು ಸಿರವಾರ ತಾಲೂಕುಗಳ ಕಾರ್ಮಿಕರು ಭಾಗವಹಿಸಿದರು.

# ರಾಯಚೂರು ಜಿಲ್ಲಾ ವ್ಯಾಪ್ತಿಯ ಎಲ್ಲಾ ರಸ್ತೆಗಳಲ್ಲಿನ ತಗ್ಗು ಗುಂಡಿ ಮುಚ್ಚಲು ಕ್ರಮವಹಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ ಸೂಚನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಡಿಸೆಂಬರ್ 08 (ಕ.ವಾ.): ಜಿಲ್ಲಾಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 6ರಂದು ನಡೆಯಿತು. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, ಸಾರ್ವಜನಿಕರಿಗೆ ಸುಗಮ ಸಾರಿಗೆ ಕಲ್ಪಿಸುವ ಹಿನ್ನೆಲೆಯಲ್ಲಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್ ಎಚ್ ಎಐ)ದ ರಸ್ತೆಗಳು ಸೇರಿದಂತೆ, ಲೋಕೋಪಯೋಗಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಹಾಗೂ ಇನ್ನಿತರ ಇಲಾಖೆಗಳ ಅಧೀನದ ಎಲ್ಲ ರಸ್ತೆಗಳಲ್ಲಿನ ತಗ್ಗು ಗುಂಡಿಗಳನ್ನು ಕೂಡಲೇ ಗುರುತಿಸಿ ಯುದ್ಧೋಪಾದಿಯಲ್ಲಿ ರಸ್ತೆಗಳನ್ನು ಸರಿಪಡಿಸುವ ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು.**



ಜಿಲ್ಲೆಯಾದ್ಯಂತ ಎಲ್ಲಾ ಕಡೆಗಿನ ರಸ್ತೆಗಳಲ್ಲಿ ಹಾಕಿರುವ ಹಂಪ್ಸಗಳು ಕಾಣುವುದೇ ಇಲ್ಲ. ಇದರಿಂದಾಗಿ ಹೆಚ್ಚಾಗಿ ದ್ವಿಚಕ್ರ ವಾಹನಗಳು ಮೇಲೆ ಪುಟಿದು ಅಪಘಾತಕ್ಕೀಡಾಗುತ್ತವೆ. ಈ ಬಗ್ಗೆ ಕೂಡಲೇ ಗಮನ ಹರಿಸಿ ಅವೈಜ್ಞಾನಿಕವಾಗಿ ಹಾಕಿದ ಎಲ್ಲ ಹಂಪ್ಸಗಳನ್ನು ಸರಿಪಡಿಸಬೇಕು. ಕಡ್ಡಾಯವಾಗಿ ಎರಡೂ ಬದಿಯಲ್ಲಿ ಬಿಳಿಪಟ್ಟಿ ಅಳವಡಿಸಿ ಹಂಪ್ಸ್ ಕಾಣುವ ಹಾಗೆ ಸುರಕ್ಷತಾ ಕ್ರಮಕ್ಕೆ ಕೂಡಲೇ ಮುಂದಾಗಬೇಕು. ಗ್ರಾಮೀಣ, ತಾಲೂಕು, ಜಿಲ್ಲಾ ಸೇರಿದಂತೆ ಎಲ್ಲಾ ರಸ್ತೆಗಳಲ್ಲಿ ಸೂಚನಾ ಫಲಕಗಳನ್ನು ಅಳವಡಿಸಿ ಅಪಘಾತ ರಹಿತ ಸಂಚಾರಕ್ಕೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಅಂತಾರಾಜ್ಯ ಹೈದ್ರಾಬಾದ್ ಸೇರಿದಂತೆ ಪ್ರಮುಖ ನಗರಗಳಿಗೆ ಸಂಪರ್ಕ ಕಲ್ಪಿಸುವ ಶಕ್ತಿನಗರ ಬಳಿಯಲ್ಲಿನ ಬೈಪಾಸನಲ್ಲಿನ ಅಪಘಾತ ಪ್ರಕರಣಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಈ ಬಗ್ಗೆ ತುರ್ತಾಗಿ ಗಮನ ಹರಿಸಿ, ಲೋಕೋಪಯೋಗಿ ಇಲಾಖೆಯ ಸುಪರ್ದಿಯಲ್ಲಿನ ಒತ್ತುವರಿ ರಸ್ತೆಯನ್ನು, ವಶಕ್ಕೆ ಪಡೆದು ಡಾಂಬರೀಕರಣಗೊಳಿಸಿ ರಸ್ತೆ ಅಗಲೀಕರಣಕ್ಕೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಶಾಲಾ ವಾಹನಗಳ ಪಿಟ್ನೆಸ್ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ರಾಯಚೂರು ಜಿಲ್ಲೆಯಲ್ಲಿ 444 ವಾಹನಗಳಿಗೆ ಫಿಟನೆಸ್ ಇರುತ್ತವೆ. ಇನ್ನುಳಿದ 175 ವಾಹನಗಳ ಪಿಟನೆಸ್ ಮುಗಿದಿರುತ್ತದೆ. ಈ ವಾಹನಗಳಿಗೆ ಪಿಟನೆಸ್ ಮಾಡಲು ನೊಟೀಸ್ ಜಾರಿ ಮಾಡಲಾಗಿದೆ ಎಂದು ಆರ್‌ಟಿಓ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಶಾಲಾ ವಾಹನಗಳು ಎಲ್ಲ ರೀತಿಯಿಂದಲೂ ಸುಭದ್ರವಾಗಿರಬೇಕು. ಈ ಬಗ್ಗೆ ಆಯಾ ಶಾಲೆಗಳ ಮಾಲೀಕರು ಗಮನ ಹರಿಸಬೇಕು. ಪಿಟನೆಸ್ ಪ್ರಮಾಣಪತ್ರ ಕಡ್ಡಾಯ ಇರುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಹಿಂದೆ, ಮಹಾನಗರ ಪಾಲಿಕೆ ಹಾಗೂ ಲೋಕೋಪಯೋಗಿ ಇಲಾಖೆಯ ಜಂಟಿ ಪ್ರಗತಿ ಪರಿಶೀಲನಾ ಸಭೆಯಲ್ಲಿ, ನಗರ ಮತ್ತು ಜಿಲ್ಲಾ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧೀನದ ರಸ್ತೆ ಹಾಗೂ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು ತ್ವರಿತಗೊಳಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಲೋಕೋಪಯೋಗಿ ಇಲಾಖೆಯಿಂದ ಮುಖ್ಯ ರಸ್ತೆಗಳ ನಿರ್ವಹಣೆ ಮತ್ತು ಹೊಸ ರಸ್ತೆ ನಿರ್ಮಾಣಕ್ಕೆ ತಿಳಿಸಲಾಗಿದೆ. ಈ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಹೇಲ್ಮೆಟ ಬಳಕೆ: ರಾಯಚೂರು ಜಿಲ್ಲೆಯಲ್ಲಿ ಹೇಲ್ಮೆಟ ಬಳಕೆಯ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಜೀವನ ತುಂಬಾ ಮುಖ್ಯ. ಹೆಲ್ಮೆಟ್ ಧರಿಸಿ ಪ್ರಾಣ ಉಳಿಸಿಕೊಂಡ ಅನೇಕ ಪ್ರಕರಣಗಳ ಬಗ್ಗೆ ಜನತೆಗೆ ತಿಳಿವಳಿಕೆ ನೀಡಿ ಹೆಲ್ಮೇಟ ಧರಿಸಲು ನಿರಂತರವಾಗಿ ಜಾಗೃತಿ ಕಾರ್ಯಕ್ರಮ ನಡೆಸಿದ್ದೇವೆ. ಪ್ರಮುಖ ಸ್ಥಳಗಳಲ್ಲಿ ಬ್ಯಾನರ್ ಅಳವಡಿಸಿ ತಿಳಿವಳಿಕೆ ನೀಡುತ್ತಿದ್ದೇವೆ ಎಂದು ಜಿಲ್ಲಾ ಪೊಲೀಸ್ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ರಾಯಚೂರು ಸಿಟಿಯಲ್ಲಿ ನಿರ್ವಹಣೆ: ಹಲವು ವರ್ಷಗಳ ನಂತರ ಮೊದಲ ಬಾರಿಗೆ ರಾಯಚೂರು ಮಹಾನಗರ ಪಾಲಿಕೆಯು ರಸ್ತೆ ನಿರ್ವಹಣಾ ಟೆಂಡರ್ ಕರೆದಿದ್ದು, ರಾಯಚೂರು ಸಿಟಿ ವ್ಯಾಪ್ತಿಯ ರಸೆಗಳಲ್ಲಿನ ತಗ್ಗು ಗುಂಡಿ ಮುಚ್ಚುವ ಕಾರ್ಯ ನಡೆದಿದೆ. ರಸ್ತೆ ಸರಿಪಡಿಸುವ ಕಾರ್ಯವನ್ನು ಅಚ್ಚುಕಟ್ಟಾಗಿ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಆದಾಗ್ಯೂ ನಗರದಲ್ಲಿನ ರಸ್ತೆಗಳಲ್ಲಿ ತಗ್ಗು ಗುಂಡಿಗಳು ಹಾಗೆ ಇವೆ ಎಂದು ದೂರುಗಳು ಬಂದಲ್ಲಿ ಯಾವುದೇ ಕೆಲಸವನ್ನು ಅನುಮೋದಿಸಲಾಗುವುದಿಲ್ಲ ಎಂದು ಎಂಜಿನಿಯರ್‌ಗಳಿಗೆ ಎಚ್ಚರಿಕೆ ನೀಡಿದ್ದಾಗಿ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ತಿಳಿಸಿದರು.

ಅಪಘಾತ ಪ್ರಕರಣಗಳು: ರಾಯಚೂರು ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಮತ್ತು ಇತರೆ ರಸ್ತೆಗಳಲ್ಲಿ ಮಾರಣಾಂತಿಕ ಅಪಘಾತ ಪ್ರಕರಣಗಳು 2022ರಲ್ಲಿ 300, 2023ರಲ್ಲಿ 264, 2024ರಲ್ಲಿ 297, 2025ರ ಡಿಸೆಂಬರ್ 5ರವರೆಗೆ 254 ಸಂಭವಿಸಿ 1177 ಜನರು ಮೃತಪಟ್ಟಿದ್ದು, 2574 ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಲೋಕೋಪಯೋಗಿ ಇಲಾಖೆಯ ಅಭಿಯಂತರರಾದ ವೆಂಕಟೇಶ ಗಳಗ, ಪೊಲೀಸ್ ಇಲಾಖೆ, ಆರ್ ಟಿಓ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

## MD ದ್ರವ್ಯಗುಣ

MD ದ್ರವ್ಯಗುಣ ಕೋರ್ಸ್ ಆಯುರ್ವೇದದ ಸ್ನಾತಕೋತ್ತರ (PG) ಕೋರ್ಸ್ ಆಗಿದ್ದು, 3 ವರ್ಷಗಳ ಅವಧಿಯಲ್ಲಿದ್ದು, ಔಷಧೀಯ ಸಸ್ಯಗಳು, ಅವುಗಳ ಗುಣಗಳು, ವರ್ಗೀಕರಣ, ಮತ್ತು ಚಿಕಿತ್ಸಕ ಬಳಕೆಯ ಬಗ್ಗೆ ಆಳವಾದ ಜ್ಞಾನ ನೀಡುತ್ತದೆ; ಇದು ಔಷಧ ತಯಾರಿಕೆ, ಫೈಟೊಕೆಮಿಸ್ಟ್ರಿ ಮತ್ತು ವಿಷಶಾಸ್ತ್ರವನ್ನು ಒಳಗೊಂಡಿದ್ದು, AIAPGET ಪ್ರವೇಶ ಪರೀಕ್ಷೆಯ ಮೂಲಕ ಪ್ರವೇಶ ಪಡೆಯಬಹುದು ಮತ್ತು ಃ೦ಒಖ ಪದವೀಧರರಿಗೆ ಸೂಕ್ತವಾಗಿದೆ. ದ್ರವ್ಯಗುಣ ವಿಜ್ಞಾನದಲ್ಲಿ ಡಾಕ್ಟರ್ ಆಫ್ ಮೆಡಿಸಿನ್ (ಆಯುರ್ವೇದ ಔಷಧಶಾಸ್ತ್ರ) ಒಂದು ಕ್ಲಿನಿಕಲ್ ಅಲ್ಲದ ಕೋರ್ಸ್ ಆಗಿದೆ. ಇದು ಆಯುರ್ವೇದ ಔಷಧಶಾಸ್ತ್ರ ಮತ್ತು ಔಷಧಶಾಸ್ತ್ರದ ತತ್ವಗಳನ್ನು ಒದಗಿಸುತ್ತದೆ, ಆಯುರ್ವೇದ ಪದ್ಧತಿಯಲ್ಲಿ ಬಳಸುವ ವಿವಾದಾತ್ಮಕ ಔಷಧಗಳು, ಕಲಬೆರಕೆ ಪದಾರ್ಥಗಳು ಮತ್ತು ಬದಲಿಗಳನ್ನು ಗುರುತಿಸುವುದರ ಮೇಲೆ ವಿಶೇಷ ಗಮನ ಹರಿಸುತ್ತದೆ. ದ್ರವ್ಯಗುಣವು ನಾಮಕರಣ (ನಾಮಜ್ಞಾನ), ಔಷಧಶಾಸ್ತ್ರ (ರೂಪಜ್ಞಾನ), ಔಷಧಶಾಸ್ತ್ರ (ಗುಣಜ್ಞಾನ) ಮತ್ತು ಔಷಧಚಿಕಿತ್ಸಾಶಾಸ್ತ್ರ (ಯುಕ್ತಿಜ್ಞಾನ) ಗಳ ಜ್ಞಾನವನ್ನು ನೀಡುತ್ತದೆ.ಈ ಕೋರ್ಸ್ ವಿದ್ಯಾರ್ಥಿಯನ್ನು ಸಂಶೋಧನಾ ವಿದ್ವಾಂಸ, ದಕ್ಷ ಶಿಕ್ಷಕ, ಆಯುರ್ವೇದ ವೈದ್ಯ ಮತ್ತು ಶಸ್ತ್ರಚಿಕಿತ್ಸಕನಾಗಲು ಸಿದ್ಧಪಡಿಸುತ್ತದೆ ಮತ್ತು ವೈದ್ಯಕೀಯ ಮತ್ತು ಆರೋಗ್ಯ ವಿಜ್ಞಾನಗಳಿಗೆ ತನ್ನ ಸೇವೆಗಳನ್ನು ಕೊಡುಗೆಯಾಗಿ ನೀಡುತ್ತದೆ. ಭಾರತೀಯ ವೈದ್ಯಕೀಯ ಪದ್ಧತಿಯ ರಾಷ್ಟ್ರೀಯ ಆಯೋಗ (NCISM) ಒಆ ದ್ರವ್ಯ ಗುಣದ ಪಠ್ಯಕ್ರಮ ಮತ್ತು ನಿಯಂತ್ರಣವನ್ನು ನಿಯಂತ್ರಿಸುತ್ತದೆ. ಒಆ ದ್ರವ್ಯ ಗುಣ ಕೋರ್ಸ್‌ಗೆ ಪ್ರವೇಶವನ್ನು ಓಖಿಂ (ರಾಷ್ಟ್ರೀಯ ಪರೀಕ್ಷಾ ಸಂಸ್ಥೆ) ನಡೆಸುವ ೦ಖಂಕಉಇಖಿ (ಅಖಿಲ ಭಾರತ ಆಯುಷ್ ಸ್ನಾತಕೋತ್ತರ ಪ್ರವೇಶ ಪರೀಕ್ಷೆ) ನಂತಹ ವಿವಿಧ ಪ್ರವೇಶ ಪರೀಕ್ಷೆಗಳ ಮೂಲಕ ಮಾಡಲಾಗುತ್ತದೆ. ದ್ರವ್ಯಗುಣ ವಿಜ್ಞಾನವು ವೈದ್ಯರಿಗೆ ಗಿಡಮೂಲಿಕೆಗಳು ಮತ್ತು ಗಿಡಮೂಲಿಕೆಗಳ ಸಂಯೋಜನೆಗಳನ್ನು ಆಯ್ಕೆ ಮಾಡಲು ಅನುವು ಮಾಡಿಕೊಡುತ್ತದೆ, ಇದು ದೋಷ ನಿರೋಧಕಗಳನ್ನು ಸೇರಿಸುತ್ತದೆ ಮತ್ತು ಸಂಯೋಜಿಸುತ್ತದೆ ಮತ್ತು ಹೆಚ್ಚಿನ ಅಸಮಾನತೆಗಳು ಅಥವಾ ಅಡ್ಡಪರಿಣಾಮಗಳನ್ನು ತಪ್ಪಿಸುತ್ತದೆ. ಇದು ಆಯುರ್ವೇದ ಔಷಧಿಗಳ ಅಡ್ಡಪರಿಣಾಮಗಳ ಕೊರತೆಯ ನಿರ್ಣಾಯಕ ಅಂಶವಾಗಿದೆ. ಈ ಕೋರ್ಸ್ ಅಭ್ಯರ್ಥಿಗಳನ್ನು ಪರೀಕ್ಷಾ ಸಂಶೋಧನಾ ವಿಜ್ಞಾನಿ, ಬೋಧಕ, ಆಯುರ್ವೇದ ವೈದ್ಯ ಮತ್ತು ತಜ್ಞರಂತಹ ಹುದ್ದೆಗಳಿಗೆ ಸಿದ್ಧಪಡಿಸುತ್ತದೆ, ಇದು ಚಿಕಿತ್ಸಕ ಮತ್ತು ಆರೋಗ್ಯ ವಿಜ್ಞಾನಗಳಿಗೆ ಪರಿಣಾಮಕಾರಿಯಾಗಿ ಕೊಡುಗೆ ನೀಡಲು ಅನುವು ಮಾಡಿಕೊಡುತ್ತದೆ. ಎಂಡಿ ದ್ರವ್ಯ ಗುಣ ಅವರು ವಿದ್ಯಾರ್ಥಿಗಳಿಗೆ ವಿವಿಧ ವೈದ್ಯಕೀಯ ಕ್ಷೇತ್ರಗಳಲ್ಲಿ ಅತ್ಯುನ್ನತ ವೇತನ ದರ್ಜೆಯೊಂದಿಗೆ ಹಲವಾರು ವೃತ್ತಿ ಅವಕಾಶಗಳನ್ನು ಒದಗಿಸಲು ಸಮರ್ಥರಾಗಿದ್ದಾರೆ. ದ್ರವ್ಯ ಗುಣದಲ್ಲಿ ಎಂಡಿ ಪ್ರಮಾಣಪತ್ರ ಪಡೆದ ನಂತರ ವಿದ್ಯಾರ್ಥಿಗಳು ಸರ್ಕಾರಿ ಅಥವಾ ಖಾಸಗಿ ಕಾಲೇಜುಗಳಲ್ಲಿ ಪ್ರಾಧ್ಯಾಪಕರು ಅಥವಾ ಬೋಧಕರಾಗಿ ಕೆಲಸ ಮಾಡಬಹುದು. ಆಯುರ್ವೇದ ಉದ್ಯೋಗಗಳು ಸಾರ್ವಜನಿಕ ಮತ್ತು ಖಾಸಗಿ ವಲಯಗಳಲ್ಲಿ ಲಭ್ಯವಿದೆ. ಎಂಡಿ ದ್ರವ್ಯ ಗುಣ ಅವರನ್ನು ಅನುಸರಿಸಿ, ಹಲವಾರು ವೃತ್ತಿ ಆಯ್ಕೆಗಳಿವೆ. ವ್ಯಕ್ತಿಗಳು ವರ್ಗ ವ್ಯವಸ್ಥಾಪಕರು, ವೈದ್ಯಕೀಯ ಪ್ರತಿನಿಧಿಗಳು, ವ್ಯವಹಾರ ಅಭಿವೃದ್ಧಿ ಅಧಿಕಾರಿಗಳು, ಆಯುರ್ವೇದ ವೈದ್ಯರು, ಮಾರಾಟ ಪ್ರತಿನಿಧಿಗಳು, ಪ್ರದೇಶ ಮಾರಾಟ ಕಾರ್ಯನಿರ್ವಾಹಕರು/ವ್ಯವಸ್ಥಾಪಕರು, ಉತ್ಪನ್ನ ವ್ಯವಸ್ಥಾಪಕರು, ಸಹಾಯಕ ಹಕ್ಕು ವ್ಯವಸ್ಥಾಪಕರು, ಔಷಧಿಕಾರರು ಮತ್ತು ಕ್ಷೇತ್ರದೊಳಗಿನ ಇತರ ಹುದ್ದೆಗಳಾಗಿ ಕೆಲಸ ಮಾಡಬಹುದು. ಪರಿಣಾಮವಾಗಿ, ಎಂಡಿ ದ್ರವ್ಯ ಗುಣದ ವಿಸ್ತಾರವು ವಿಸ್ತರಿಸುತ್ತಿದೆ.

# ಗುಡದೂರು ಶಾಲೆಯಲ್ಲಿ ಮಕ್ಕಳ ಗ್ರಾಮ ಸಭೆ

❏ ನೈಜ್ಯ ದೆಸೆ ನ್ಯೂಸ್



**ಮಸ್ಕಿ: ಡಿ 8 ತಾಲೂಕಿನ ಗುಡದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುಡದೂರು ಗ್ರಾಮ ಉನ್ನತೀಕರಿಸಿದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರದಂದು ಮಕ್ಕಳ ಗ್ರಾಮ ಸಭೆ ನಡೆಸಲಾಯಿತು.**

ಈ ವೇಳೆ ಪಿಡಿಓ ಕೃಷ್ಣ ಹುನಗುಂದ ಮಾತನಾಡಿ, ಸಂವಿಧಾನ ಮೂಲ ಆಶಯದಂತೆ ಸ್ಥಳೀಯ ಸರ್ಕಾರಗಳು ಸ್ಥಾಪಿತವಾಗಿದ್ದು, ಗ್ರಾಮ ಪಂಚಾಯಿತಿಗಳು ಗ್ರಾಮೀಣ ಭಾಗದ ಅಭಿವೃದ್ಧಿಗಾಗಿ ಸ್ಥಾಪಿತವಾದ ಸ್ವತಂತ್ರ ಕಚೇರಿಗಳಾಗಿದ್ದು, ಇಲ್ಲಿಗೆ ಮಕ್ಕಳು ಸಹ ಬಂದು ಸೌಲಭ್ಯ ಪಡೆಯಬಹುದು ಹಾಗೂ ಮಕ್ಕಳು ಇಂದಿನ ಪ್ರಜೆಗಳು ಬೆಳೆಯುವ ಪೈರು ಮೊಳಕೆಯಲ್ಲಿ ಎಂಬಂತೆ ಈ ವಯಸ್ಸಿನಲ್ಲೇ ಹೆಚ್ಚು ಅವಕಾಶ ಕೊಡಬೇಕು. ವಿದ್ಯಾರ್ಥಿಗಳು ನೀವು ಓದುವ ಶಾಲೆ ಅಥವಾ ವಾಸಿಸುವ ಸ್ಥಳದಲ್ಲಿ ಅಗತ್ಯ ಮೂಲಭೂತ ಸೌಲಭ್ಯಕ್ಕಾಗಿ ಗ್ರಾಪಂ ಸಂಪರ್ಕಿಸಬಹುದು ಎಂದು ತಿಳಿಸಿದರು.

ನಂತರ ಅಂಗನವಾಡಿ ಮೇಲ್ವಿಚಾರಕರಾದ ರಾಧಾ.ಡಿ ಮಕ್ಕಳ ಸಹಾಯವಾಣಿ 1098 ಕುರಿತು ಮಾತನಾಡಿದರು, 18 ವರ್ಷದ ಒಳಗಿನ ಹೆಣ್ಣು ಮಗುವಿಗೆ ಅಥವಾ 21 ವರ್ಷದ ಒಳಗಿನ ಗಂಡು ಮಗುವಿನ ಮದುವೆ ಮಾಡಿದರೆ ಅದು ಬಾಲ್ಯ ವಿವಾಹ ಆ ಸಂದರ್ಭದಲ್ಲಿ ಸ್ಥಳೀಯರು 1098 ಗೆ ಕರೆ ಮಾಡಿ ಸಹಾಯ ಪಡೆಯಿರಿ ಹಾಗೂ ಆ ಊರಿನ ಶಾಲಾ ಮುಖ್ಯ ಶಿಕ್ಷಕರು ಅಥವಾ ಗ್ರಾ.ಪಂ ಪಿಡಿಓ ರವರ ಗಮನಕ್ಕೆ, ಅಥವಾ ಅಂಗನವಾಡಿ ಶಿಕ್ಷಕಿಯರ, ಮೇಲ್ವಿಚಾರಕರ ಗಮನಕ್ಕೆ ತರಲು ತಿಳಿಸಿದರು.

ಹಾಗೂ ಎಲ್ಲರೂ ಕಡ್ಡಾಯವಾಗಿ ಶಾಲೆಗೆ ಹೋಗಿ ಶಿಕ್ಷಣ ಕಲಿಯಬೇಕು. ಶಾಲೆ ಬಿಟ್ಟ ಮಕ್ಕಳ ಕುರಿತು ಮಾಹಿತಿ ನೀಡಲು, ಹಾಗೂ ಕಡ್ಡಾಯ ಶಿಕ್ಷಣ, ಮಕ್ಕಳ ಸಹಾಯವಾಣಿ, ಬಾಲ್ಯ ವಿವಾಹ ನಿಷೇಧ, ಮಕ್ಕಳ ರಕ್ಷಣೆ, ಕಾವಲು ಕುರಿತು ಸವಿಸ್ತಾರವಾಗಿ ವಿವರಣೆ ತಿಳಿಸಿದರು. ಈ ವೇಳೆ ಮೇರನಾಳ ಅಂಗನವಾಡಿ ಕೇಂದ್ರಕ್ಕೆ ಹಾಗೂ ಪರಾಪುರ ಸರಕಾರಿ ಕಿರಿಯ ಉರ್ದು ಪ್ರಾಥಮಿಕ ಶಾಲೆಗೆ ಗ್ರಾಮ ಪಂಚಾಯಿತಿ ವತಿಯಿಂದ ಶಾಲೆಗೆ ಶುದ್ಧ ಕುಡಿಯುವ ನೀರಿನ ವಾಟರ್ ಫಿಲ್ಟರ್ ನೀಡಲಾಯಿತು. ಈ ಸಂದರ್ಭದಲ್ಲಿ ಪಿಡಿಓ ಕೃಷ್ಣ ಹುನಗುಂದ, ರಮೇಶ ಹೆಡಗಿಬಾಳ್ ಕ್ಯಾಂಪ್, ಗುಡದೂರು ಶಾಲೆಯ ವಿದ್ಯಾರ್ಥಿಗಳು, ಶಿಕ್ಷಕರು, ಅಂಗನವಾಡಿ ಮೇಲ್ವಿಚಾರಕರು, ಆರೋಗ್ಯ ಇಲಾಖೆ ಸಿಬ್ಬಂದಿಗಳು, ಗ್ರಾಮ ಪಂಚಾಯಿತಿ ಕಾರ್ಯಾಲಯದ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರಿಗೆ ನಿವೇಶನ ನೀಡುವಂತೆ ಶಾಸಕರಿಗೆ ಮನವಿ



❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದಲ್ಲಿ ಪ್ರಗತಿಪರ ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಯೂನಿಯನ್ ತಾಲೂಕು ಘಟಕದಿಂದ ಶಾಸಕ ಹಂಪಯ್ಯನಾಯಕ ರವರಿಗೆ ರಾಜ್ಯ ಸಮಿತಿ ಸದಸ್ಯರಾದ ಸದಾನಂದ ಮನವಿ ಸಲ್ಲಿಸಿ ಮಾತನಾಡಿ ಮಾನ್ವಿ ಪಟ್ಟಣದಲ್ಲಿ 10 ಸಾವಿರ ಕ್ಕೂ ಹೆಚ್ಚು ನೊಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿದ್ದಾರೆ ಇವರುಗಳು .ಅಸಂಘಟಿತ ವಲಯದಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರಾಗಿದ್ದಾರೆ.**

ಹೆಚ್ಚಿನ ಕಾರ್ಮಿಕರು ವಾಸಮಾಡುವುದಕ್ಕೆ ಮನೆಗಳು ಇಲ್ಲದೆ ,ಮನೆ ಕಟ್ಟಿಕೊಳ್ಳುವುದಕ್ಕೆ ನಿವೇಶನ ಇಲ್ಲದೆ ಹೆಚ್ಚಿನ ಸಂಖ್ಯೆಯಲ್ಲಿ ಕೊಳೆಗೇರಿ ಪ್ರದೇಶಗಳಲ್ಲಿ ವಾಸಮಾಡುತ್ತಿದ್ದಾರೆ.ಇವರಿಗೆ ಕೂಲಿ ಹಾಗೂ ಕೆಲಸದ ಭದ್ರತೆಕೂಡ ಇಲ್ಲದೆ ಇರುವುದರಿಂದ ಇಂತಹ ಕಾರ್ಮಿಕರನ್ನು ಗುರುತಿಸಿ ಪಟ್ಟಣದಲ್ಲಿ ಸೂಕ್ತವಾದ ನಿವೇಶನವನ್ನು ನೀಡಿದಲ್ಲಿ ಅವರುಗಳು ಕೇಂದ್ರ ಮತ್ತು ರಾಜ್ಯಗಳಿಂದ ಜಾರಿಯಾಗುವ ಪ್ರಧಾನಮಂತ್ರಿ ಆವಾಸ್ ಯೋಜನೆ ಆಶ್ರಯ ಯೋಜನೆ, ಹಾಗೂ ಕೊಳಗೇರಿ ನಿರ್ಮೂಲನ ಅಭಿವೃದಿ ಮಂಡಳಿಗಳ ವಿವಿಧ ಯೋಜನೆಗಳಡಿಯಲ್ಲಿ ಮನೆಗಳನ್ನು ಕಟ್ಟಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ಎಂದು ಒತ್ತಾಯಿಸಿದರು. ತಾಲೂಕ ಉಪಾಧ್ಯಕ್ಷ ಅಮರೇಶ, ಸಂ. ಕಾ.ಕಾಶೀಂ, ರಮೇಶ ಕವಿತಾಳ, ಭೀಮಣ್ಣಕಲ್ಲೂರ, ರಮೇಶ ಸಿರವಾರ,ಸೀತಾರಾಮ,ಆದೆಪ್ಪ,ಮುತ್ತಯ್ಯ,ಬಾಲರಾಜ,ಮಹಮ್ಮದ್‌ಸಾಬ್, ಮಂಜುನಾಥ ಮುಂತಾದವರು ಇದ್ದರು.

# ರಾಯಚೂರು ತಂಡಕ್ಕೆ ಟ್ರೋಫಿ – ಟೆನಿಸ್, ಕಬಡ್ಡಿ

❏ ನೈಜ್ಯ ದೆಸೆ ನ್ಯೂಸ್






**ರಾಯಚೂರು: ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಒಳಾಂಗಣ ಕ್ರೀಡಾಂಣದಲ್ಲಿ ಶನಿವಾರ ನಡೆದ ಅಂತರ ಕಾಲೇಜುಗಳ ಕ್ರೀಡಾಕೂಟದ ಪುರುಷರ ಟೆನಿಸ್ ಡಬಲ್ಸ್‌ನಲ್ಲಿ ರಾಯಚೂರಿನ ಪಿಜಿಎಸ್ ತಂಡ ಹಾಗೂ ಮಹಿಳೆಯರ ವಿಭಾಗದಲ್ಲಿ ಕೃಷಿ ಎಂಜಿನಿಯರಿಂಗ್ ಕಾಲೇಜಿನ ತಂಡ ಟ್ರೋಫಿ ಗೆದ್ದುಕೊಂಡಿವೆ. ಪುರುಷರ ವಿಭಾಗದ ಟೆನಿಸ್ ಫೈನಲ್‌ನಲ್ಲಿ ರಾಯಚೂರಿನ ಶ್ರೀನಿವಾಸ ದೀಕ್ಷಿತ, ರವಿತೇಜಾ ಹಾಗೂ ಬೋಧಿಸತ್ವ ನೇತೃತ್ವ ತಂಡ ಭೀಮರಾಯನಗುಡಿ ಕಾಲೇಜಿನ ತಂಡವನ್ನು ಸೋಲಿಸಿ ಟ್ರೋಫಿ ಗೆದ್ದುಕೊಂಡಿತು.**

ಮಹಿಳೆಯರ ವಿಭಾಗದ ಟೆನಿಸ್ ಫೈನಲ್‌ನಲ್ಲಿ ಕೃಷಿ ಎಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿನಿಯರ ತಂಡ ಗಂಗಾವತಿಯ ಕೃಷಿ ಕಾಲೇಜಿನ ತಂಡವನ್ನು ಪರಾಭವಗೊಳಿಸಿ ಟ್ರೋಫಿ ತನ್ನದಾಗಿಸಿಕೊಂಡಿತು.

ಕಬಡ್ಡಿಯಲ್ಲಿ ರಾಯಚೂರು ತಂಡಕ್ಕೆ ಜಯ: ಅಂತರ ಕಾಲೇಜುಗಳ ಕ್ರೀಡಾಕೂಟದ ಕಬಡ್ಡಿ ಫೈನಲ್‌ನಲ್ಲಿ ರಾಯಚೂರಿನ ಕೃಷಿ ಕಾಲೇಜು ತಂಡವು ಗಂಗಾವತಿಯ ಕೃಷಿ ಕಾಲೇಜಿನ ತಂಡವನ್ನು 39–11ಅಂಕಗಳಿಂದ ಸೋಲಿಸಿ ವಿಜಯ ಪತಾಕೆ ಹಾರಿಸಿತು. ಸೆಮಿಫೈನಲ್‌ನಲ್ಲಿ ಕೃಷಿ ಎಂಜಿನಿಯರಿಂಗ್ ಕಾಲೇಜಿನ ತಂಡವು ಗಂಗಾವತಿಯ ತಂಡದ ಎದುರು ಸೋಲನುಭವಿಸಿತು. ಇನ್ನೊಂದು ಸೆಮಿಫೈನಲ್‌ನಲ್ಲಿ ಭೀಮರಾಯನಗುಡಿಯ ತಂಡವು ಕೃಷಿ ಎಂಜಿನಿಯರಿಂಗ್ ಕಾಲೇಜಿನ ತಂಡವನ್ನು ಸೋಲಿಸಿ ಫೈನಲ್ ಪ್ರವೇಶ ಮಾಡಿತು. ಕೃಷಿ ಎಂಜಿನಿಯರಿಂಗ್ ಕಾಲೇಜಿನ ಡೀನ್ ಎಂ.ಎಸ್. ಅಯ್ಯನಗೌಡರ, ಕೃಷಿ ವಿವಿಯ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ರಾಜಣ್ಣ ಬಹುಮಾನ ವಿತರಿಸಿದರು. ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಒಳಗಾಣ ಕ್ರೀಡಾಂಗಣದಲ್ಲಿ ನಡೆದ ಅಂತರ ಕಾಲೇಜುಗಳ ಕ್ರೀಡಾಕೂಟದ ಟೆನಿಸ್ ಡಬಲ್ಸ್‌ನಲ್ಲಿ ನಡೆದ ಪಂದ್ಯದಲ್ಲಿ ವಿಜೇತರಿಗೆ ಕೃಷಿ ಎಂಜಿನಿಯರಿಂಗ್ ಕಾಲೇಜಿನ ಡೀನ್ ಎಂ.ಎಸ್.ಅಯ್ಯನಗೌಡರ ಕೃಷಿ ವಿವಿಯ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ರಾಜಣ್ಣ ಬಹುಮಾನ ವಿತರಿಸಿದರು. ಸುಧಾರಾಣಿ ಶಗುಪ್ತಾ ಪಲ್ಲವಿ ಶಾಂತಮ್ಮ ಝಪಾ ಉಪಸ್ಥಿತರಿದ್ದರು.

## ರಾಷ್ಟ್ರ ಮಟ್ಟಕ್ಕೆ ಆಯ್ಕೆ

❏ ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ತಾಲ್ಲೂಕಿನ ಮಿಣಜಗಿ ಸರ್ಕಾರಿ ಪ್ರೌಢಶಾಲೆಯ 9ನೆಯ ತರಗತಿ ವಿದ್ಯಾರ್ಥಿನಿ ಅಕ್ಷತಾ ಹಳ್ಳೂರ ಇವಳು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಶನಿವಾರ ನಡೆದ ರಾಜ್ಯಮಟ್ಟದ ಅಥ್ಲೆಟಿಕ್ಸ್ ಸ್ಪರ್ಧೆಯ ಪೋಲ್ ವಾಲ್ಟ್ (ಕೋಲು ನೆಗೆತ) ಸ್ಪರ್ಧೆಯಲ್ಲಿ ದ್ವಿತೀಯಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.**




ಇದೇ ಡಿ.13 ರಿಂದ ಉತ್ತರ ಪ್ರದೇಶದಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಕರ್ನಾಟಕವನ್ನುಪ್ರತಿನಿಧಿಸಲಿದ್ದಾಳೆ.

ಈ ಕ್ರೀಡಾಪಟುವಿಗೆ ತರಬೇತಿ ನೀಡಿದ ದೈಹಿಕ ಶಿಕ್ಷಣ ಶಿಕ್ಷಕ ರಾವತ ಪೂಜೇರಿಯವರಿಗೆ ಶಾಲೆಯ ಮುಖ್ಯ ಶಿಕ್ಷಕಕ ಬಿ.ಹೆಚ್ .ತಿಳಗೂಳ, ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷ ಶಂಕರಗೌಡ ಬಿರಾದಾರ ಮತ್ತು ಸದಸ್ಯರು, ಶಾಲೆಯ ಶಿಕ್ಷಕರು, ಗ್ರಾಮಸ್ಥರು ಅಭಿನಂದಿಸಿದ್ದಾರೆ.

# ಅದ್ದೂರಿಯಾಗಿ ಜರುಗಿದ ಗೋಮರ್ಸಿ ಶಂಶುದ್ದೀನ್ ಖಾದ್ರಿ ಉರುಸು

❏ ನೈಜ್ಯ ದೆಸೆ ನ್ಯೂಸ್



**ಸಿಂಧನೂರು: ತಾಲ್ಲೂಕಿನ ಗೋಮರ್ಸಿ ಗ್ರಾಮದಲ್ಲಿ ಹಿಂದೂ–ಮುಸ್ಲಿಂ ಭಾವೈಕ್ಯತೆ ಸಂಕೇತವಾದ ಹಜರತ್ ಮೀರಾಂ ಸೈಯದ್ ಶಾಹ ಶಂಶುದ್ದೀನ್ ಖಾದ್ರಿ ಅವರ ಉರುಸು ಸೋಮವಾರ ಅದ್ದೂರಿಯಾಗಿ ನಡೆಯಿತು.**

ಉರುಸಿನ ಪ್ರಯುಕ್ತ ಧ್ವಜಾರೋಹಣ ನೆರವೇರಿಸುವ ಕಾರ್ಯಕ್ರಮ ಸೇರಿದಂತೆ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಬೆಳಗಿನ ಜಾವ 5ಗಂಟೆಯಿಂದ ಸೈಯದ್ ಖಾಸೀಂ ಖಾದ್ರಿ ಉರ್ಫ್ ಸರ್ಕಾರ್ ಪಾಷಾ ಸಾಹೇಬ್ ನೇತೃತ್ವದಲ್ಲಿ ಗಂಧ ಮೆರವಣಿಗೆ ನಡೆಯಿತು. ಬಳಿಕ ಧಾರ್ಮಿಕ ವಿಧಾನಗಳ ಪ್ರಕಾರ ಪೂಜಾ–ಪ್ರಾರ್ಥನೆಗಳು ನಡೆದವು. ಗೋಮರ್ಸಿ ಸೇರಿ ಸುತ್ತಮುತ್ತಲಿನ ಹಳ್ಳಿಗಳಿಂದ ಎಲ್ಲಾ ಜಾತಿ ಜನಾಂಗದ ಜನರು ದರ್ಗಾದಲ್ಲಿ ಸಕ್ಕರೆ ಒದಿಸಿ, ಭಕ್ತಿ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಸೈಯದ್ ಇಸ್ಮಾಯಿಲ್ ಖಾದ್ರಿ ಅತರ್‌ಬಾಬಾ ಜಾಗೀರ್‌ದಾರ್ ಗೋಮರ್ಸಿ, ಸೈಯದ್ ಮೈನುದ್ದೀನ್ ಖಾದ್ರಿ ತೆಕ್ಕಲಕೋಟೆ, ಸೈಯದ್ ಷಾ ತಾಹೇರ್‌ಖಾದ್ರಿ ಜಂತಕಲ್, ಸೈಯದ್ ಹಾಜಂಖಾದ್ರಿ ಕಂಪ್ಲಿ, ಸೈಯದ್ ತುರಾಬ್ ಖಾದ್ರಿ ಕಂಪ್ಲಿ, ಸೈಯದ್ ಮತೀನ್ ಖಾದ್ರಿ ಕಂಪ್ಲಿ, ಖಾದರ್‌ಭಾಷಾ ತಾತನವರು ಗೋಮರ್ಸಿ, ಸೈಯದ್ ಸಜ್ಜಾದ್ ಖಾದ್ರಿ, ಸೈಯದ್ ಬಾಬಾ ಖಾದ್ರಿ, ಮುಖಂಡರಾದ ಸೈಯದ್ ಸಜ್ಜಾದ್‌ಖಾದ್ರಿ, ಸೈಯದ್ ಯುನೂಸ್‌ಪಾಷಾ ಖಾದ್ರಿ, ಮರೇಗೌಡ, ಬಸನಗೌಡ, ದೊಡ್ಡಬಸನಗೌಡ, ಶ್ರೀನಿವಾಸ, ಖಲೀಲ್‌ಪಾಷಾ, ಮಹ್ಮದ್‌ಸಾಬ್, ರಸೂಲ್‌ಸಾಬ್, ಬುಡ್ಡಾಸಾಬ್ ಮುಜಾವಾರ್, ಶಾಮೀದ್, ಶಾಹೀದ್ ಸೇರಿದಂತೆ ಮಾಡಶಿರವಾರ ಹಾಗೂ ಗೋಮರ್ಸಿ ಗ್ರಾ.ಪಂ. ಸದಸ್ಯರು, ಗ್ರಾಮಸ್ಥರು ಇತರರು ಇದ್ದರು. ಉರುಸಿನ ಅಂಗವಾಗಿ ರಾತ್ರಿ ಖವ್ವಾಲಿ ಕಾರ್ಯಕ್ರಮದಲ್ಲಿ ಭಕ್ತರ ಮನಸೂರೆಗೊಂಡಿತು.

# ಹಟ್ಟಿ ಚಿನ್ನದ ಗಣಿ ಸರಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಬೆಳಕು ಯೂಥ್ ಫೌಂಡೇಶನ್ ಸಂಸ್ಥೆ ವತಿಯಿಂದ ಪಠ್ಯಪುಸ್ತಕ ಕ್ರೀಡಾ ಸಾಮಗ್ರಿ ವಿತರಣೆ



**ಹಟ್ಟಿ ಚಿನ್ನದ ಗಣಿ: ಬೆಳಕು ಯೂತ್ ಫೌಂಡೇಶನ್ ವತಿಯಿಂದ ಹಟ್ಟಿ ಚಿನ್ನದ ಗಣಿ (ಕ್ಯಾಂಪ್)ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ನೋಟ್ ಬುಕ್ ಕೊಡುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು. ಕಾರ್ಯಕ್ರಮ ಕುರಿತು ಮಾತನಾಡಿದ ಎಐಟಿಯುಸಿ ಮುಖಂಡರಾದ ಚಂದ್ರಶೇಖರ್ ಮಾತನಾಡಿ ಸರ್ಕಾರ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುವಂಥ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ವಿಶೇಷವಾಗಿ ಎಸ್ ಎಸ್ ಎಲ್ ಸಿ ಯಲ್ಲಿ ವಿದ್ಯಾಭ್ಯಾಸ ಮಾಡುವಂತ ವಿದ್ಯಾರ್ಥಿಗಳಿಗೆ ಬೆಳಕು ಯೂತ್ ಫೌಂಡೇಶನ್ ವತಿಯಿಂದ ಪಾಠ ಪುಸ್ತಕ ವಿತರಣೆ ಮಾಡಲಾಯಿತು.**

ಇದರ ಜೊತೆಗೆ ಕ್ರೀಡಾಪಟುಗಳಿಗೆ ಮತ್ತು 10ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುವಂಥ ಕ್ರೀಡಾಪಟುಗಳಿಗೆ ಕ್ರಿಕೆಟ್ ಕಿಟ್,ವಾಲಿಬಾಲ್,ಫುಟ್ಬಾಲ್,ಹಾಗೂ ಇನ್ನಿತರ ಕ್ರೀಡಾ ಸಮಗ್ರಿಗಳನ್ನು ಬೆಳಕು ಯೂತ್ ಫೌಂಡೇಶನ್ ವತಿಯಿಂದ ವಿತರಣೆ ಮಾಡಲಾಯಿತು.ಅದೇ ರೀತಿ ಗಣರಾಜ್ಯೋತ್ಸವ ಅಗಸ್ಟ್ 15 ಸ್ವಾತಂತ್ರ ದಿನಾಚರಣೆ ಸಂದರ್ಭದಲ್ಲಿ ರಕ್ತದಾನ ಶಿಬಿರ ಮಾಡುವುದರ ಜೊತೆಗೆ ಹಲವಾರು ಜನ ಪರ ಕೆಲಸಗಳನ್ನು ಮಾಡುತ್ತಾ ಬಂದಿದೆ.ಇಷ್ಟೆಲ್ಲಾ ಕೆಲಸಗಳಿಗೆ ಮೂಲ ಪ್ರೇರಣೆ ಎಂದರೆ ನಮ್ಮವರೇ ಹಾಗೂ ಸ್ಥಳೀಯರು ಆಗಿರುವ ಶ್ರೀರಾಜಶೇಖರ '(ಕರ್ನಾಟಕ ಆಡಳಿತ ಸೇವೆ) ಇವರು ಯಾವಾಗಲೂ ಬೆಳಕು ಯೂತ್ ಫೌಂಡೇಶನ್ ಜೊತೆಗೆ ನಿರಂತರ ಸಂಪರ್ಕದಲ್ಲಿ ಇದ್ದು ನಮ್ಮ ಸಂಸ್ಥೆಯ ಪದಾಧಿಕಾರಿಗಳು ಅವರನ್ನು ಭೇಟಿಯಾಗಿ ಕೇಳಿದಾಗ ಅವರು ಸರಕಾರ ಮಟ್ಟದಲ್ಲಿ ಹಲವಾರು ಜನಪರ ಯೋಜನೆಗಳನ್ನು ಅನುಷ್ಠಾನಗೊಳಿಸುವುದಕ್ಕೆ ಬೆಳಕು ಯೂತ್ ಫೌಂಡೇಶನ್ ಜೊತೆಗೆ ಅವರು ಕೈಜೋಡಿಸಿದ್ದಾರೆ.

ಈ ವೇದಿಕೆಯ ಮುಖಾಂತರ ಶ್ರೀಯುತ ರಾಜಶೇಖರ್ ಅವರಿಗೆ ಬೆಳಕು ಯೂತ್ ಫೌಂಡೇಶನ್ ವತಿಯಿಂದ ಅಭಿನಂದನೆಗಳು ಮತ್ತು ಧನ್ಯವಾದಗಳನ್ನು ತಿಳಿಸುತ್ತಾ.ಹೀಗೆ ಜನ ಮುಖಿವಾಗಿ ಕೆಲಸ ಮಾಡುವಂತಹ ಬೆಳಕು ಯೂತ್ ಫೌಂಡೇಶನ್ ಸಂಸ್ಥೆಯು 2023 ರಿಂದ ಪ್ರಾರಂಭವಾಗಿ ಅಂದಿನಿಂದ ನಿರಂತರವಾಗಿ ಜನರ ಮಧ್ಯೆ ಇದ್ದುಕೊಂಡು ಹಲವಾರು ಜನಪರ ಕಾರ್ಯಕ್ರಮಗಳನ್ನು ವಿದ್ಯಾರ್ಥಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಲಸ ಮಾಡುತ್ತಾ ಇದೆ.ಬೆಳಕು ಯೂತ್ ಫೌಂಡೇಶನ್ ಸಂಸ್ಥೆಗೆ ಅಧ್ಯಕ್ಷರಾಗಿ ಸ್ಥಳೀಯರಾದ ರಾಜಕುಮಾರ.ಉಪಾಧ್ಯಕ್ಷರಾಗಿ ತಿಪ್ಪಣ್ಣ ಮಾಚುನೂರು,ಪ್ರಧಾನ ಕಾರ್ಯದರ್ಶಿ ಶ್ರೀಮತಿ ಫೆಚ್ಚೆಲಮ್ಮ ,ಕಾರ್ಯದರ್ಶಿಯಾಗಿ ಚಂದ್ರಶೇಖರ್, ಇನ್ನು ಅನೇಕರು ಸೇರಿ ಒಂದು ಒಗ್ಗಟ್ಟಿನಿಂದ ಕೆಲಸ ಮಾಡುತ್ತಾ ಇದ್ದೇವೆ.

ಮುಂದಿನ ದಿನಗಳಲ್ಲಿ ಬೆಳಕು ಯೂತ್ ಫೌಂಡೇಶನ್ ಸಂಸ್ಥೆಯು ಹಲವಾರು ಜನಪರ ಯೋಜನೆಗಳನ್ನು ಸರಕಾರದ ಮಟ್ಟದಲ್ಲಿ ತಂದು ಹಟ್ಟಿ ನಾಗರಿಕರಿಗೆ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಯರಿಗೆ ಹಾಗೂ ಯುವ ಕ್ರೀಡಾ ಪ್ರತಿಭೆಗಳಿಗೆ ಪ್ರೋತ್ಸಾಹಿಸುವ ದೃಷ್ಟಿಯಿಂದ ಬೆಳಕು ಯೂತ್ ಫೌಂಡೇಶನ್ ಸಂಸ್ಥೆ ಕೆಲಸ ಮಾಡುತ್ತದೆ ಎಂದು ಮಾತನಾಡಿದರು.

ಅದೇ ರೀತಿ ಶ್ರೀಮತಿ ಫ್ರೆಂಚಲಮ್ಮ ಮಾತನಾಡಿ ಬೆಳಕು ಯೂತ್ ಫೌಂಡೇಶನ್ ಗೆ ಅನೇಕ ರೀತಿಯಿಂದ ರಾಜಶೇಖರ್ ಸರ್ ಅವರ ಜೊತೆ ಮಾತನಾಡಿ ಹಟ್ಟಿಯಲ್ಲಿ ನಾವು ಏನಾದರೂ ಒಂದು ಕೆಲಸ ಮಾಡಬೇಕು ಎಂದರೆ ರಾಜಶೇಖರ್ ಸರ್ ನಮಗೆ ಸಹಕಾರಿಯಾಗಿ ಸರಕಾರದಿಂದ ನಮಗೆ ಕೆಲಸ ಮಾಡಿಕೊಡುತ್ತಾರೆ.

ಅದೇ ರೀತಿ ಸರ್ಕಾರ ಮಟ್ಟದಲ್ಲಿ ಏನೇನು ಯೋಜನೆಗಳಿವೆ ಎಂದು ತಿಳಿಸಿ ಸಂಸ್ಥೆಗೆ ನಮಗೆ ಅನುಕೂಲವಾಗುವ ರೀತಿಯಲ್ಲಿ ಸಹಾಯ ಸಹಕಾರ ನೀಡುತ್ತಾರೆ ಎಂದು ಮಾತನಾಡಿದರು.

ಈ ವೇದಿಕೆಯಲ್ಲಿ ಬೆಳಕು ಯೂತ್ ಫೌಂಡೇಶನ್ ಸಂಸ್ಥೆಯ ಅಧ್ಯಕ್ಷರಾದ ರಾಜಶೇಖರ್ ಹಾಗೂ ಎ ಐ ಟಿ ಯು ಸಿ ಮುಖಂಡರಾದ ಚಂದ್ರಶೇಖರ್ ಇವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಬೆಳಕು ಫೌಂಡೇಶನ್ ಸಂಸ್ಥೆಯ ಅಧ್ಯಕ್ಷರು ರಾಜಶೇಖರ್,ಉಪಾಧ್ಯಕ್ಷ ತಿಪ್ಪಣ್ಣ ಮಾಚನೂರು ,ಪ್ರಧಾನ ಕಾರ್ಯದರ್ಶಿ ಶ್ರೀಮತಿ ಪೆಂಚಲಮ್ಮ ,ಜಂಟಿ ಕಾರ್ಯದರ್ಶಿ ನವೀನ್ ,ಎಐಟಿಯುಸಿ ಮುಖಂಡರಾದ ಚಂದ್ರಶೇಖರ್,ಕಾರ್ಮಿಕ ಮುಖಂಡರುಗಳಾದ ನರಸಪ್ಪ ಬದರದಿನ್ನಿ,ಮುನಿರ್ದ್ದೀನ್ ,ಸಲೀಂ ಪಾಷಾ, ಅಬ್ರಹಾಂ, ಗಂಗೂ ಶಾಕೋದಿ, ಕುಟೇಮ್ಮ, ಮೌನುದ್ದೀನ್ ಬೂದಿನಾಳ, ಸಾಬುದ್ದೀನ್, ಆನಂದ ಕೊತಾ,ಹಾಗು ಎಐಟಿಯುಸಿ ಕಾರ್ಯಕರ್ತರು ಮತ್ತು ಎಸ್ ಡಿ ಎಂ ಸಿ ಅಧ್ಯಕ್ಷ ಮೌಲಾಸಾಬ್ ಶಾಲೆಯ ಮುಖ್ಯ ಗುರುಗಳು ಹಾಗೂ ಸಹ ಶಿಕ್ಷಕರು ಉಪಸ್ಥಿತರಿದ್ದರು.